ಸಂಪುಟ 01 | ಸಂಚಿಕೆ 48 | ಸೋಮವಾರ 19 ಜನವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1. ಗೋವಾ ಬಿಡುಗಡೆ ದಿನ (Goa Liberation Day)**
ಈ ದಿನವು 1961 Portugal (ಪೋರ್ಚುಗೀಸ್) ರಾಜಧಾನಿಯಿಂದ ಗೋವಾ ಮುಕ್ತಗೊಂಡ ದಿನ ಎಂದು ಆಚರಿಸಲಾಗುತ್ತದೆ. 1961 ಡಿಸೆಂಬರ್ 19ರಂದು ಭಾರತದ ಸೇನ ಮಾಡಿದ ಕಾರ್ಯಾಚರಣೆಯ ಫಲವಾಗಿ ಗೋವಾ ಹಾಗೂ ಅದರ ಪ್ರದೇಶಗಳು ಪೋರ್ಚುಗೀಸ್ ಆಡಳಿತದಿಂದ ಸ್ವತಂತ್ರವಾಗಿದ್ದವು.

**2) 2026ರ ಕೊಕ್ಬೊರೊಕ್ ದಿನವನ್ನು (Kokborok Day)**
ಜನವರಿ 19, ಸೋಮವಾರ ಆಚರಿಸಲಾಗುತ್ತದೆ. ತ್ರಿಪುರಾದ ಸ್ಥಳೀಯ ಭಾಷೆಯಾದ 'ಕೊಕ್ಬೊರೊಕ್' ಅನ್ನು ರಾಜ್ಯದ ಅಧಿಕೃತ ಭಾಷೆಯಾಗಿ 1979 ರಲ್ಲಿ ಅಂಗೀಕರಿಸಿದ ನೆನಪಿಗಾಗಿ ಪ್ರತಿ ವರ್ಷ ಈ ದಿನವನ್ನು ಆಚರಿಸಲಾಗುತ್ತದೆ.

**3) ಮಾರ್ಟಿನ್ ಲೂಥರ್ ಕಿಂಗ್ ಜೂನಿಯರ್ ದಿನ**
ಮಾರ್ಟಿನ್ ಲೂಥರ್ ಕಿಂಗ್ ಜೂನಿಯರ್ ದಿನವು ಯುನೈಟೆಡ್ ಸ್ಟೇಟ್ಸ್‌ನಲ್ಲಿ ಜನವರಿಯಲ್ಲಿ ಮೂರನೇ ಸೋಮವಾರದಂದು ನಡೆಯುವ ಫೆಡರಲ್ ರಜಾದಿನವಾಗಿದೆ. ಇದು ಮಾರ್ಟಿನ್ ಲೂಥರ್ ಕಿಂಗ್ ಅವರ ಜೀವನ ಮತ್ತು ಪರಂಪರೆಯನ್ನು ಗೌರವಿಸುತ್ತದೆ

## ಸುಭಾಷಿತ


ಬಾಲ್ಯದಲ್ಲಿ ಕಲಿತದ್ದೇ ಬದುಕಿನಲ್ಲಿ
ಉಳಿಯುವುದರಿಂದ ಮಕ್ಕಳಿಗೆ
ಕನ್ನಡ ಸಂಸ್ಕಾರ ಕಲಿಸಬೇಕು.

–ಚೆನ್ನವೀರ ಕಣವಿ

## ಅಯ್ಯಪ್ಪ ಸ್ವಾಮಿ ಪ್ರಸಾದದಿಂದ ಜೀವನ ಪಾವನ: ಯಡಿಯಾಪುರ

■ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಅಯ್ಯಪ್ಪ ಸ್ವಾಮಿಯ ಮಹಾಪೂಜೆಗೆ ನನ್ನನ್ನು ಆಮಂತ್ರಿಸುವುದರ ಜೊತೆಗೆ ಇದೀಗ ಸನ್ನಿಧಿ ಅವರ ಮಹಾಪ್ರಸಾದವನ್ನು ನನಗೆ ತಂದು ಕೊಟ್ಟಿರುವುದು ನನ್ನ ಸೌಭಾಗ್ಯವೆಂದು ಭಾವಿಸುತ್ತೇನೆ ಎಂದು ಬಿಜೆಪಿ ಮುಖಂಡ ಬಸನಗೌಡ ಪಾಟೀಲ ಎಡಿಯಾಪೂರ ಹೇಳಿದರು. ಶನಿವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಅಯ್ಯಪ್ಪ ಸ್ವಾಮಿಯ ಸನ್ನಿಧಿಗೆ ಹೋಗಿ ಮರಳಿದ ಭಕ್ತಾದಿಗಳು ಪ್ರಸಾದ ನೀಡಿ ತಮ್ಮನ್ನು ಗೌರವಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು. ಮುಂದಿನ ವರ್ಷ ನಡೆಯುವ ಮಹಾ ಪೂಜೆಯ ಎಲ್ಲ ಕಾರ್ಯಕ್ರಮಗಳು ಇನ್ನಷ್ಟೂ ಅದ್ದೂರಿಯಾಗಿ ನಡೆಯಲು ನಾನು ನಿಮ್ಮೊಂದಿಗೆ ಇದ್ದು ಸಹಕರಿಸುತ್ತೇನೆ ಎಂದರು. ಈ ಸಮಯದಲ್ಲಿ ಅಯ್ಯಪ್ಪ ಸ್ವಾಮಿ ಬಳಗದ ಸದಸ್ಯರಾದ ಬಸವರಾಜ ಸಜ್ಜನ,ಗುರು ಕಲಾಲ, ಸಂಧೀಪ ದೇಸಾಯಿ,ಚಂದ್ರಶೇಖರ ವಿಜಾಪೂರ, ಗಣ್ಯರಾದ ಕೆ.ಸಿ.ದೇಸಾಯಿ (ಶಳ್ಳಗಿ), ವಿಶ್ವನಾಥರೆಡ್ಡಿ ಪಾಟೀಲ(ಲಕ್ಕುಂಡಿ), ಶರಣಗೌಡ ಪಾಟೀಲ (ಕರಿಭಾವಿ). ಗುತ್ತಿಗೆದಾರ ಶ್ರೀನಿವಾಸರೆಡ್ಡಿ ಬಳ್ಳಾರಿ ಮತ್ತಿತರರು ಇದ್ದರು.



# ದುಂದು ವೆಚ್ಚಕ್ಕೆ ಕಡಿವಾಣ – ಸಮಾಜಕ್ಕೆ ಸಂದೇಶ ನೀಡಿದ ಸಾಮೂಹಿಕ ವಿವಾಹ: ವಿಧಾನಸಭೆ ಸಭಾಧ್ಯಕ್ಷರು ಯು.ಟಿ. ಖಾದರ್







■ ನೈಜ್ಯ ದೆಸೆ ನ್ಯೂಸ್

ಮಾನ್ವಿ : ದೇಶಕ್ಕೆ ಶಾಂತಿ, ಸಹಬಾಳ್ವೆ ಹಾಗೂ ಸಾಮಾಜಿಕ ಹೊಣೆಗಾರಿಕೆಯ ಮಹತ್ವದ ಸಂದೇಶವನ್ನು ನೀಡುವಂತಹ ಕಾರ್ಯಕ್ರಮಗಳು ಇಂದಿನ ಸಮಾಜಕ್ಕೆ ಅತ್ಯಂತ ಅಗತ್ಯವಾಗಿವೆ ಎಂದು ರಾಜ್ಯ ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ. ಖಾದರ್ ಹೇಳಿದರು.ಅವರು ಪಟ್ಟಣದ ಅಕ್ಬರಿ ಮಸ್ಜಿದ್ ಹಿಂದಿನ ಆವರಣದಲ್ಲಿ ದಾರುಸ್ಸಲಾಮ್ ಫೌಂಡೇಶನ್ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ಮುಸ್ಲಿಂ ಸಮುದಾಯದ 111 ಜೋಡಿ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ, ಮದುವೆಯ ಹೆಸರಿನಲ್ಲಿ ದುಂದು ವೆಚ್ಚಗಳು ಹೆಚ್ಚುತ್ತಿರುವ ಈ ದಿನಗಳಲ್ಲಿ, ಸರಳತೆ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಅಳವಡಿಸಿಕೊಂಡು 111 ಜೋಡಿಗಳ ವಿವಾಹವನ್ನು ಒಂದೇ ವೇದಿಕೆಯಲ್ಲಿ ನಡೆಸಿರುವುದು ರಾಜ್ಯಕ್ಕೆ ಮಾದರಿಯಾಗಿದೆ ಎಂದು ಶ್ಲಾಘಿಸಿದರು. ದಾರುಸ್ಸಲಾಮ್ ಫೌಂಡೇಶನ್ ಟ್ರಸ್ಟ್‌ನ ಅಧ್ಯಕ್ಷರಾದ ಸೈಯದ್ ಅಕ್ಬರ್ ಪಾಷಾ ಹುಸೇನಿ ಅವರು ತಮ್ಮ ಪುತ್ರನ ವಿವಾಹವನ್ನೂ ಸಹ ಸಾಮೂಹಿಕ ವಿವಾಹಗಳೊಂದಿಗೆ ಆಚರಿಸಿರುವುದು ಅತ್ಯಂತ ಶ್ಲಾಘನೀಯ ಕಾರ್ಯವಾಗಿದೆ ಎಂದು ಹೇಳಿದರು. ಸಮಾಜದಲ್ಲಿರುವ ಅನುಕೂಲಸ್ಥರು ಈ ರೀತಿಯ ಆದರ್ಶ ಕಾರ್ಯಕ್ರಮಗಳನ್ನು ಆಯೋಜಿಸಿದಲ್ಲಿ ಅಲ್ಪಸಂಖ್ಯಾತ ಸಮುದಾಯದ ಬಡ ಹಾಗೂ ನಿರ್ಗತಿಕ ಕುಟುಂಬಗಳು ಸಂತೋಷದ ಬದುಕು ನಡೆಸಲು ಸಾಧ್ಯವಾಗುತ್ತದೆ ಎಂದರು. ಸಾಮೂಹಿಕ ವಿವಾಹದಲ್ಲಿ ಜೀವನ ಆರಂಭಿಸುತ್ತಿರುವ ನವದಂಪತಿಗಳಿಗೆ ಶುಭಹಾರೈಸಿದರು. ರಾಜ್ಯ ಲೋಕೋಪಯೋಗಿ ಇಲಾಖೆಯ ಸಚಿವರಾದ ಸತೀಶ್ ಜಾರಕಿಹೊಳಿ ಮಾತನಾಡಿ, ಸಮಾಜದಲ್ಲಿ ನಿಜವಾದ ಬದಲಾವಣೆ ಹಣದಿಂದ ಮಾತ್ರ ಸಾಧ್ಯವಿಲ್ಲ, ಸಾಮಾಜಿಕ ಕಾರ್ಯಕ್ರಮಗಳ ಮೂಲಕವೇ ಬದಲಾವಣೆ ಸಾಧ್ಯ ಎಂದು ಹೇಳಿದರು. ಇಂತಹ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮಗಳನ್ನು ಪ್ರತಿವರ್ಷ ನಡೆಸಿದರೆ ದುಂದು ವೆಚ್ಚದ ಮದುವೆಗಳಿಂದಾಗುವ ಆರ್ಥಿಕ ಹೊರೆಯನ್ನು ತಪ್ಪಿಸಬಹುದು. ಇದರಿಂದ ಬಡ ಕುಟುಂಬಗಳಿಗೆ ಬಹುಮುಖ್ಯ ನೆರವು ದೊರೆಯುತ್ತದೆ ಎಂದರು. ರಾಜ್ಯ ಸರ್ಕಾರವು ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದ್ದು, ಶಿಕ್ಷಣ, ಆರೋಗ್ಯ ಹಾಗೂ ಆರ್ಥಿಕ ಸ್ವಾವಲಂಬನೆಗೆ ಹೆಚ್ಚಿನ ಒತ್ತು ನೀಡಲಾಗಿದೆ. ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ವೈದ್ಯಕೀಯ ಹಾಗೂ ತಾಂತ್ರಿಕ ಶಿಕ್ಷಣ ಪಡೆದು, ಸಾಮೂಹಿಕ ವಿವಾಹದಲ್ಲಿ ಜೋಡಿಯಾದ ದಂಪತಿಗಳು ಮಿತ ಸಂತಾನ ಹಾಗೂ ಆದರ್ಶ ಜೀವನವನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ□ತಂತ್ರಜ್ಞಾನ ಸಚಿವರಾದ ಎನ್.ಎಸ್. ಬೋಸರಾಜು ಮಾತನಾಡಿ, ಸೈಯದ್ ಅಕ್ಬರ್ ಪಾಷಾ ಹುಸೇನಿ ಅವರು ಜಿಲ್ಲೆಯಲ್ಲಿ ಅನೇಕ ಸಾಮಾಜಿಕ ಕಾರ್ಯಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಬಡವರಿಗೆ ಮಾಸಿಕ ನೆರವು, ಬಡ್ಡಿರಹಿತ ಸಾಲ, ಶಿಕ್ಷಣ ಸಂಸ್ಥೆಗಳ ಮೂಲಕ ವಿದ್ಯಾಭ್ಯಾಸ, ಉಚಿತ ಆರೋಗ್ಯ ಶಿಬಿರಗಳು ಸೇರಿದಂತೆ ಹಲವಾರು ಜನಪರ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಿಕೊಂಡು ಬಂದಿದ್ದಾರೆ ಎಂದು ಹೇಳಿದರು. ಅಲ್ಪಸಂಖ್ಯಾತ ಸಮುದಾಯದ ಕಾರ್ಯಕ್ರಮಗಳಿಗೆ ಅನುಕೂಲವಾಗಲೆಂದು ತಮ್ಮ ಶಾಸಕರ ಅವಧಿಯಲ್ಲಿ ಒಂದು ಕೋಟಿ ರೂ. ವೆಚ್ಚದಲ್ಲಿ ಈದ್ಗಾ ಶಾದಿ ಮಹಲ್ ನಿರ್ಮಾಣ ಮಾಡಲಾಗಿದೆ ಎಂದು ತಿಳಿಸಿದರು. ಸರ್ಕಾರದಿಂದ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಅನೇಕ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಕಾರ್ಯಕ್ರಮದಲ್ಲಿ ಮಾತನಾಡಿದ ದಾರುಸ್ಸಲಾಮ್ ಫೌಂಡೇಶನ್ ಟ್ರಸ್ಟ್ ಅಧ್ಯಕ್ಷರಾದ ಸೈಯದ್ ಅಕ್ಬರ್ ಪಾಷಾ ಹುಸೇನಿ ಅವರು, ಮದುವೆಯ ಹೆಸರಿನಲ್ಲಿ ಅನಾವಶ್ಯಕ ದುಂದು ವೆಚ್ಚಗಳಿಗೆ ಕಡಿವಾಣ ಹಾಕಿ, ಬಡ ಹಾಗೂ ನಿರ್ಗತಿಕ ಕುಟುಂಬಗಳಿಗೆ ನೆರವಾಗುವ ಉದ್ದೇಶದಿಂದ ಈ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಮಾಜ ಸೇವೆಯ ಕೆಲಸಗಳಿಗೆ ಯಾವಾಗಲೂ ತಾವು ಸಿದ್ಧರಾಗಿರುವುದಾಗಿ ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಮಾತೆ ಇಸ್ಲಾಮಿ ಹಿಂದ್‌ನ ರಾಷ್ಟ್ರೀಯ ಉಪಾಧ್ಯಕ್ಷರಾದ ಮೌಲಾನಾ ವಲಿಯುಲ್ಲಾ ಸಯೀದಿ ಫಲಾಹಿ ವಹಿಸಿ, ವಿವಾಹದ ವಿಧಿ ವಿಧಾನಗಳನ್ನು ನೆರವೇರಿಸಿದರು. ಈ ಸಂದರ್ಭ ದಾರುಸ್ಸಲಾಮ್ ಫೌಂಡೇಶನ್ ಟ್ರಸ್ಟ್ ವತಿಯಿಂದ ಒಟ್ಟು 111 ಜೋಡಿ ಮುಸ್ಲಿಂ ಸಮುದಾಯದವರ ಉಚಿತ ಸಾಮೂಹಿಕ ವಿವಾಹ ನಡೆಯಿತು. ಈ ಸಾಮೂಹಿಕ ವಿವಾಹದಲ್ಲಿ ಉದ್ಯಮಿಗಳಾದ ಸೈಯದ್ ಅಕ್ಬರ್ ಪಾಷಾ ಹುಸೇನಿ ಅವರ ಪುತ್ರ ಸೈಯದ್ ಆತಿಫ್ ಆದ್ನಾನ್ ಅವರ ವಿವಾಹವೂ ನೆರವೇರಿತು.ಕಾರ್ಯಕ್ರಮದಲ್ಲಿ ಶಾಸಕ ಜಿ. ಹಂಪಯ್ಯ ನಾಯಕ, ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ್, ಮಾಜಿ ಸಚಿವ ಶಿವನಗೌಡ ನಾಯಕ, ಮಾಜಿ ಸಂಸದ ಬಿ.ವಿ. ನಾಯಕ, ಮಾಜಿ ಶಾಸಕರು ರಾಜಾ ವೆಂಕಟಪ್ಪ ನಾಯಕ, ಗಂಗಾಧರ ನಾಯಕ, ಬಸವನಗೌಡ ಬ್ಯಾಗವಾಟ್, ಪ್ರತಾಪಗೌಡ ಪಾಟೀಲ್, ರಾಜಶೇಖರ ನಾಯಕ ಸೇರಿದಂತೆ ಅನೇಕ ರಾಜಕೀಯ ಮುಖಂಡರು ಮಾತನಾಡಿದರು. ಇದಲ್ಲದೆ ಜಮಾತೆ ಇಸ್ಲಾಮಿ ಹಿಂದ್ ನ್ಯೂ ದೆಹಲಿಯ ಉಪಾಧ್ಯಕ್ಷ ಮೌಲಾನಾ ವಲಿಯುಲ್ಲಾ ಸಯೀದಿ ಫಲಾಹಿ, ರಾಜ್ಯ ಕಾರ್ಯದರ್ಶಿ ಹಾಗೂ ಮಂಗಳೂರಿನ ಶಾಂತಿ ಪ್ರಕಾಶನದ ಅಧ್ಯಕ್ಷ ಜನಾಬ್ ಮಹಮ್ಮದ್ ಕುನ್ಹಿ, ಮುಸ್ಲಿಂ ಧರ್ಮಗುರುಗಳಾದ ಸೈಯದ್ ಸಜ್ಜದ್ ಮತವಾಲೆ, ಖಾಲಿದ್ ಗುರು, ಶೇಖ್ ಫರೀದ್ ಉಮ್ರಿ, ರವಿ ಬೋಸರಾಜು, ನಯೋಪ್ರ ತಾಲೂಕು ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಬಿ.ಕೆ. ಅಂಬರೀಶಪ್ಪ ವಕೀಲರು, ತಿಮ್ಮರೆಡ್ಡಿ ಭೋಗವಾಟಿ, ಬಷೀರುದಿನ್, ಮಹಮ್ಮದ್ ಶಲಾಂ, ರಾಜಕ್ ಉಸ್ತಾದ್, ಶಾಂತಪ್ಪ, ಅಸ್ಲಂ ಪಾಷಾ ಸೇರಿದಂತೆ ಅನೇಕ ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಪಾದಪೂಜೆ ಸಂಸ್ಕೃತಿಯ ಪ್ರತೀಕ:ಜಾಲಹಳ್ಳಿ ಶ್ರೀ




■ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ತಂದೆ ತಾಯಿಗಳಿಗೆ ಪಾದ ಪೂಜೆಯನ್ನು ಅರ್ಪಿಸುವುದು ಭಾರತೀಯ ಸಂಸ್ಕೃತಿಯ ಪ್ರತೀಕವಾಗಿದೆ ಇದು ಭಾರತದಲ್ಲಿ ಹುಟ್ಟಿದರೂ ಇಂದು ಇಂಡೋನೇಷ್ಯಾದಲ್ಲಿ ಹೆಚ್ಚು ಪ್ರಸಿದ್ಧಿಯನ್ನು ಪಡೆದಿದೆ ಎಂದು ಜಾಲಹಳ್ಳಿ ಸಂಸ್ಥಾನ ಬ್ರಹನ್ಮಠದ ಪೂಜ್ಯ ಶ್ರೀ ಷ.ಬ್ರ.ಜಯಶಾಂತಲಿಂಗೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು. ಶನಿವಾರ ಮೈಲೇಶ್ವರದ ಕನ್ನಡ ಹಾಗೂ ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಬ್ರಿಲಿಯಂಟ್ ಕಲಾ ವೈಭವ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.ಈ ಸಂಸ್ಥೆ ಪಾದ ಪೂಜೆ ಅಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ನೋಡಿದರೆ ಇಲ್ಲಿ ಗುಣಮಟ್ಟದ ಶಿಕ್ಷಣದೊಂದಿಗೆ ಮಕ್ಕಳಿಗೆ ಒಳ್ಳೆಯ ಸಂಸ್ಕಾರಗಳನ್ನೂ ಕೊಡಲಾಗುತ್ತಿದೆ ಇದು ಬಹಳ ಸಂತೋಷದ ವಿಷಯ, ಈ ಸಂಸ್ಥೆ ಇನ್ನೂ ಎತ್ತರಕ್ಕೆ ಬೆಳೆಯಲೆಂದು ಹಾರೈಸುತ್ತೇನೆ ನಮ್ಮ ಆಶೀರ್ವಾದ ಈ ಸಂಘದ ಆಡಳಿ ಮಂಡಳಿಯ ಸದಸ್ಯರು ಹಾಗೂ ಸಿಬ್ಬಂದಿಗಳೊಂದಿಗೆ ಸದಾ ಇರಲಿದೆ ಎಂದರು. ಸಮಾರಂಭ ಉದ್ಘಾಟಿಸಿ ಡಾ.ಭರಮಣ್ಣ ಕಾಮನ್ ಮಾತನಾಡಿ ನಮ್ಮ ಶಿಕ್ಷಣ ಸಂಸ್ಥೆಗಳಿಂದ ಸಿಗುವ ಶಿಕ್ಷಣದಿಂದ ಮಕ್ಕಳು ಸಂಸ್ಕಾರವಂತರಾಗಿ, ಹೆತ್ತವರನ್ನು ಗೌರವಿಸುವಂಥವರಾಗಿ, ಸಮಾಜದ ಒಳ್ಳೆಯ ಜವಾಬ್ದಾರಿಯುತ ನಾಗರಿಕರಾಗಲು ಸಾಧ್ಯವಾಗಬೇಕು ಅಂತಹ ಕೆಲಸವನ್ನು ಬ್ರಿಲಿಯಂಟ್ ಸಂಸ್ಥೆ ಮಾಡುತ್ತಿದೆ ನಿಮ್ಮೆಲ್ಲರ ಸಹಕಾರ ಇವರಿಗೆ ಇರಲಿ ಎಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಕಾರ್ಕಳದ ಉಪನ್ಯಾಸಕಿ ಅಕ್ಷಯಾ ಗೋಖಲೆ ಮಾತನಾಡಿ ಭಾರತ ವಿಶ್ವದಲ್ಲಿಯೇ ಶ್ರೇಷ್ಠ ಸಂಸ್ಕೃತಿ, ಪರಂಪರೆಯನ್ನು ಹೊಂದಿದ ದೇಶ ಇದನ್ನು ರಕ್ಷಿಸುವ ಕಾರ್ಯ ನಾವೆಲ್ಲರೂ ಮಾಡಬೇಕಾಗಿದೆ. ಹೆತ್ತವರು ಮಕ್ಕಳಿಗೆ ಚಿಕ್ಕಂದಿನಿಂದಲೆ ಒಳ್ಳೆಯ ಸಂಸ್ಕಾರಗಳನ್ನು ಮನೆಯಿಂದಲೇ ಕೊಡುವಂತಾಗಬೇಕು ನಮ್ಮ ಶಿಕ್ಷಣ ಸಂಸ್ಥೆಗಳಿಂದಲೂ ಈ ಕಾರ್ಯ ಆಗಬೇಕು ಇದನ್ನು ಬ್ರಿಲಿಯಂಟ್ ಸಂಸ್ಥೆ ಮಾಡುತ್ತಿರುವುದು ಸಂತೋಷದ ವಿಷಯ ಎಂದರು. ಇದೇ ಸಂದರ್ಭದಲ್ಲಿ ಸಂಸ್ಥೆ ವತಿಯಿಂದ ಮೈಲೇಶ್ವರ ಗ್ರಾಮದ ಗಣ್ಯರಿಗೆ, ಪತ್ರಕರ್ತರಿಗೆ,ಆರಕ್ಷಕ ಸಿಬ್ಬಂದಿ, ಆರೋಗ್ಯ ಇಲಾಖೆ, ವಿದ್ಯುತ್ ನಿಗಮ ಮಂಡಳಿ, ಹಾಗೂ ಸಾಧನೆಗೈದ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಮತ್ತು ಅತಿಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು. ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎನ್.ಬಿ. ನಡುವಿನಮನಿ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಕ ಸಿದ್ದು ಕರಡಿ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಸಿ ಆರ್ ಸಿ ಸಂಗಮೇಶ್ ಪಾಲ್ಕಿ, ಮು.ಗು. ಡಾ.ವಿನಾಯಕ ಪಟಗಾರ, ಬಿ.ಜಿ.ಕರಕಳ್ಳಿ, ಆಡಳಿತ ಮಂಡಳಿ ಉಪಾಧ್ಯಕ್ಷ ಆರ್ ಬಿ ನಡುವಿನಮನಿ, ಕಾರ್ಯದರ್ಶಿ ಎಮ್ ಬಿ ಮಡಿವಾಳರ, ನಿರ್ದೇಶಕರಾದ ಎಸ್ ಎಚ್ ಪಾಟೀಲ, ಶಶಿಧರ್ ಎಂ ಬಿರಾದಾರ, ನಿರ್ದೇಶಕಿ ಎ□□□ಂ ಬಿರಾದಾರ, ಎನ್.ಎಸ್.ಗಡಗಿ, ಮುಖ್ಯೋಪಾಧ್ಯಾಯರು, ಬೋಧಕ ಭೋದಿಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು. ವೇದಿಕೆ ಕಾರ್ಯಕ್ರಮದ ನಂತರ ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ಆರ್ಚರಿಯಲ್ಲಿ ನವ್ಯಾಗೆ ಎರಡು ಚಿನ್ನ ದೇವಮ್ಮಗೆ ಒಂದು ಬೆಳ್ಳಿ ಒಂದು ಕಂಚು

■ ನೈಜ್ಯ ದೆಸೆ ನ್ಯೂಸ್

ರಾಜ್ಯ ಒಲಿಂಪಿಕ್ಸ್ ಕ್ರೀಡಾಕೂಟದ ಎರಡನೇ ದಿನವಾದ ಶನಿವಾರ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳ ಕ್ರೀಡಾಪಟುಗಳು ಮೇಲುಗೈ ಸಾಧಿಸಿದ್ದಾರೆ.ಆರ್ಚರಿಯಲ್ಲಿ ನವ್ಯಾ ಎರಡು ಚಿನ್ನದ ಪದಕ, ದೇವಮ್ಮ ಒಂದು ಬೆಳ್ಳಿ ಮತ್ತು ಕಂಚು ಪಡೆದರು. ಫೆನ್ಸಿಂಗ್ ಫಾಯಿಲ್ ವಿಭಾಗದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸಯೇದಾ ಬಂಗಾರದ ಪದಕಕ್ಕೆ ಕೊರಳೊಡ್ಡಿದರು. ಆರ್ಚರಿ: ಮಹಿಳೆಯರ 50 ಮೀಟರ್ ವಿಭಾಗ– ನವ್ಯಾ ವಿನ್ಸೆಂಟ್–1, ದೇವಮ್ಮ–2, ಅಶ್ವಿಕಾ–3. 30 ಮೀಟರ್– ನವ್ಯಾ ವಿನ್ಸೆಂಟ್–1, ಅನ್ನಪೂರ್ಣ–2, ದೇವಮ್ಮ–3. ಪುರುಷರ 30 ಮೀಟರ್– ಅಮಿತ್ ಜಯಂತ್ ಗೌಡ–1, ಮೌನಿಶ್ ಕುಮಾರ್–2, ವೀರಭದ್ರ–3. 50 ಮೀಟರ್– ದೇವರಾಜ್–1, ಅಮಿತ್ ಜಯಂತ್ ಗೌಡ–2, ಎಸ್.ವಿನಯ್‌ಕುಮಾರ್–3.ಫೆನ್ಸಿಂಗ್ (ಮಹಿಳೆಯರ ವಿಭಾಗ): ಫಾಯಿಲ್– ಸಯೇದಾ ಇಫ್ತಾಖರ್ ಬಾನು (ಬೆಂಗಳೂರು ಗ್ರಾಮಾಂತರ)–1, ಐ.ಕೆ.ಶ್ರೀರಕ್ಷಾ (ಬೆಂಗಳೂರು ಗ್ರಾಮಾಂತರ)–2, ಧೃತ್ವಿಕ ಎನ್.ಆನಂದ್ (ಬೆಂಗಳೂರು ನಗರ)–3. ಈಪೀ– ಸೆಜಲ್ ಗುಲಿಯಾ (ಬೆಂಗಳೂರು ನಗರ)–1, ಎನ್.ಬಿ.ದಿವ್ಯಾ (ಬೆಂಗಳೂರು ನಗರ)–2, ಎಚ್.ವಿ.ಲಹರಿ (ಬೆಂಗಳೂರು ನಗರ)–3. ಸೇಬರ್– ದೀಕ್ಷಾ ಎಲ್.ಗೌಡ (ಬೆಂಗಳೂರು ನಗರ)–1, ಕೆ.ಲಕ್ಷ್ಯಾ (ಬೆಂಗಳೂರು ನಗರ)–2, ಎಚ್.ವಂದನಾ (ಬೆಂಗಳೂರು ಗ್ರಾಮಾಂತರ)–3.ಫೆನ್ಸಿಂಗ್ (ಪುರುಷರ ವಿಭಾಗ): ಫಾಯಿಲ್– ಸೈಯದ್ ಬಹುದ್ದೀನ್ (ಬೆಂಗಳೂರು ಗ್ರಾಮಾಂತರ)–1, ಗ್ಯಾಬ್ರಿಯಲ್ ಎಲಿಶ್ (ಬೆಂಗಳೂರು ನಗರ)–2, ಮನು ನಾಯಕ (ಚಾಮರಾಜನಗರ)–3. ಈಪೀ– ಎಂ.ಜಯಸೂರ್ಯ (ಚಾಮರಾಜನಗರ)–1, ಎಂ.ಸುಶಾಂತ್ ಸೂರ್ಯ (ಬೆಂಗಳೂರು ನಗರ)–2, ಎಸ್.ಯಶ್ವಂತ್ (ಬೆಂಗಳೂರು ನಗರ)–3. ಸೇಬರ್– ಬಿ.ಆರ್.ಸುಹಾಸ್ (ಚಾಮರಾಜನಗರ)–1, ಯಶವಂತ ನಾಯಕ (ಚಾಮರಾಜನಗರ)–2, ರಾಜೇಂದ್ರ ಸಿಂಗ್ (ಬೆಂಗಳೂರು ನಗರ)–3. ಕಯಾಕಿಂಗ್ ಮತ್ತು ಕೆನೊಯಿಂಗ್: 500 ಮೀಟರ್ ಸ್ಪರ್ಧೆಯ ಮಹಿಳೆಯರ ವಿಭಾಗ– ಸಮರಾ ಎಚಾಕೊ (ಬೆಂಗಳೂರ ನಗರ)–1, ಅದ್ವಿತ (ಬೆಂಗಳೂರು ಗ್ರಾಮಾಂತರ)–2, ಲಾಸ್ಯ (ತುಮಕೂರು)–3. ಪುರುಷರ ವಿಭಾಗ– ಲಲಿತ್ ಪ್ರಣವ್ (ಬೆಂಗಳೂರು ನಗರ)–1, ಆದ್ಯಂತ್ ಕುಮಾರ್ (ಬೆಂಗಳೂರು ಗ್ರಾಮಾಂತರ)–2, ನಿಧಿನ್ (ತುಮಕೂರು)–3. ಸ್ಟ್ಯಾಂಡ್ ಅಪ್ ಪೆಡಲ್: ಪುರುಷರ ವಿಭಾಗ– ಮಂಜುನಾಥ್ ನಾಯ್ಕ್ (ಉಡುಪಿ)–1, ರೋಹನ್ (ಮಂಗಳೂರು)–2, ಪವನ್ (ಕೋಲಾರ)–3. ಮಹಿಳೆಯರ ವಿಭಾಗ– ಧನ್ಯಾ (ಉಡುಪಿ)–1, ಸೌಮ್ಯಾ (ಚಿತ್ರದುರ್ಗ)–2, ಕೀರ್ತನಾ(ಮಂಗಳೂರು)–3.ಶಟಲ್ ಬ್ಯಾಡ್ಮಿಂಟನ್: ಪುರುಷರ ವಿಭಾಗ– ನಿಶ್ಚಲ್ ಎಸ್.ಗೌಡ (ಬೆಂಗಳೂರು ನಗರ)–1, ಶ್ರೇಯಸ್ ಚಂದ್ರಶೇಖರ್ (ಬೆಂಗಳೂರು ನಗರ)–2, ರೆಹಾನ್ ಆರಾಜ್ (ಬೆಂಗಳೂರು ನಗರ)–3. ಮಹಿಳೆಯರ ವಿಭಾಗ– ಅಖಿಲಾ ಆನಂದ್ (ಬೆಂಗಳೂರು ನಗರ)–1, ಹಂಸಾ ಮುರಳೀಧರ್ (ಬೆಂಗಳೂರು ನಗರ)–2, ಅಕ್ಷತಾಂಜಲಿ ವಿಜಯ್‌ರಾವ್ (ಬೆಂಗಳೂರು ನಗರ)–3.ಟೆಕ್ವಾಂಡೊ: ಮಹಿಳೆಯರ ವಿಭಾಗ– 44 ಕೆ.ಜಿ– ಎಚ್.ಎಸ್.ಫಿರ್ದೋಸ್ ಸುಕ್ತಾನ (ಕೊಪ್ಪಳ)–1, ಸ್ವೀಟಿ ಶರ್ಮಾ (ಬೆಂಗಳೂರು)–2, ಎಸ್.ಚಂದನಾ (ಚಿತ್ರದುರ್ಗ)–3. 49 ಕೆ.ಜಿ– ವೈಷ್ಣವಿ (ಬೆಂಗಳೂರು)–1, ಬಿ.ವಿ.ನೈಪುಣ್ಯ (ತುಮಕೂರು)–2, ಎಸ್.ಸಿರಿ ಮಹಾಲಕ್ಷ್ಮಿ (ಬೆಂಗಳೂರು)–3. 57 ಕೆ.ಜಿ– ಎಚ್.ಆರ್.ಸುಮೇದಾ (ಬೆಂಗಳೂರು)–1, ಕೆ.ಎ.ಅನಿಕಾ (ಬೆಂಗಳೂರು)–2, ಜೆ.ಬಿ.ಶ್ರದ್ಧಾ (ಮೈಸೂರು)–3.67 ಕೆ.ಜಿ– ದೀಕ್ಷಾ ರಾಜ್ ಗೋಪಾಲ್ (ಬೆಂಗಳೂರು)–1, ಶೃತಿ ಅರ್ಜುನ್‌ಗೌಡ (ಬೆಳಗಾವಿ)–2, ಲೋಹಿತಾ (ಬೆಂಗಳೂರು)–3. 73 ಕೆ.ಜಿ– ಲೇಖಾ ನೀಲಕಂಠ (ಕೊಪ್ಪಳ)–1, ಎಂ.ವಿ.ಸಂಸ್ಕೃತಿ (ಬೆಂಗಳೂರು)–2, ಎನ್.ಕೆ.ಪ್ರಜ್ಞಾ(ಚಿತ್ರದುರ್ಗ)–3. 73 ಕೆಜಿ ಮೇಲ್ಪಟ್ಟು– ಅನನ್ಯಾ ಭದಕ (ಬೆಂಗಳೂರು)–1, ಧೃವಿಕ ರಾಜಶೇಖರ್ (ಬೆಂಗಳೂರು)–2, ಎಸ್.ಸಿಂಚನಾ (ರಾಮನಗರ)–3.ಕಯಾಕಿಂಗ್ ಮತ್ತು ಕೆನೊಯಿಂಗ್ ಸ್ಪರ್ಧೆಯ ಝುಲಕ್ ಪುರುಷರ ವಿಭಾಗ– 50 ಕೆ.ಜಿ– ಮಹ್ಮದ್ ಉಮರ್ ಷರೀಫ್ (ಬೆಂಗಳೂರು ನಗರ)–1, ಆರ್.ಸಮೀರ್ (ರಾಮನಗರ)–2, ತೇಜಸ್ವ ಸಿ.ಆನಂದಿನಿ (ಬೆಳಗಾವಿ)–3. 58 ಕೆ.ಜಿ– ರೋಹಿತ್ ಕುಮಾರ್ (ಬೆಂಗಳೂರು ಗ್ರಾಮಾಂತರ)–1, ಎಂ.ಮೂರ್ತಿ (ರಾಮನಗರ), ಸಂದೀಪ್ ಕುಶ್ವಂತ್(ಬೆಂಗಳೂರು)–3.ಶಟಲ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ವಿಜೇತರು



## ಸಾಹಿತ್ಯ ಸಿಂಚನ

1. ನೆಚ್ಚು.!

ಸಕ್ಕರೆ ಅಚ್ಚಿಗಿಂತಲೂ
ಅವಳಕ್ಕರೆಯೆ ಮೆಚ್ಚು
ಬೆಲ್ಲದ ಅಚ್ಚಿಗಿಂತಲೂ
ನಗೆಗಲ್ಲವೇ ಅಚ್ಚುಮೆಚ್ಚು.!

2. ಮಳ್ಳು..!

ಅವಳು ಮನೆಗೆ ಬಂದಿದ್ದು
ಬರಿದೆ ಬೀರಲಿಕ್ಕಲ್ಲ ಎಳ್ಳು
ನನ್ನನ್ನೇ ನೋಡಲಿಕ್ಕೆಂದು
ಅರ್ಥವೇ ಆಗದ ನಾ ಮಳ್ಳು.!

3. ನೀತಿ–ಪ್ರೀತಿ.!

ಎಳ್ಳುಬೆಲ್ಲ ಕೊಟ್ಟ ಎಲ್ಲರೂ ಹೇಳಿದ್ದು
"ಅನುದಿನವು ಒಳ್ಳೆಯ ಮಾತಾಡೋಣ"
ಎಳ್ಳುಬೆಲ್ಲ ಕೊಟ್ಟ ಅವಳು ಹೇಳಿದ್ದು
"ಅನುಕ್ಷಣವು ಒಲವಿನ ಮಾತಾಡೋಣ"

4. ಸಂಕ್ರಾಂತಿ.!

ಕಂಗಳಲ್ಲಿ ಎಳ್ಳಿನ ಕಾಂತಿ
ಅಧರದಲಿ ಬೆಲ್ಲದ ಪ್ರೀತಿ
ಅವಳಿಂದ ಜಗ ಮುಗಿಲಗಲ
ಕಣಕಣದಲೂ ಸಂಕ್ರಾಂತಿ
ಕ್ಷಣ–ಕ್ಷಣವೂ ಸಂಪ್ರೀತಿ

5. ಸಂಕ್ರಾಂತಿ ವಿನಂತಿ.!

ಸೂರ್ಯನೂ ಬದಲಿಸಿಹ ದಿಕ್ಕು
ಹುಡುಗಿ ಮತ್ತೇಕೆ ನಿನಗಿನ್ನೂ..
ಬಿಂಕ ಬಿಗುಮಾನ ಹುಸಿ ಸೊಕ್ಕು
ಕೊಟ್ಟುಬಿಡು ಇಂದು ನನಗಿನ್ನು
ನಿನ್ನ ಪ್ರೇಮಿಸುವ ಪೂರ್ಣಹಕ್ಕು.!

6. ಕಣ್ಣಾ–ಮುಚ್ಚಾಲೆ.!

ಮಳ್ಳಿಯಂತೆ ಬಂದಳು ಅವಳು
ಬೀರಲು ಹಿಡಿದು ಎಳ್ಳು–ಬೆಲ್ಲ
ಕಳ್ಳನಂತೆ ಕುಳಿತನು ಇವನು
ನೋಡಲು ಕದ್ದು ಮೆಲ್ಲ–ಮೆಲ್ಲ.!

7. ಎಳ್ಳುಬೆಲ್ಲದ ಬಾಲೆ.!

ಹುರಿಗಡಲೆಯಂತ ನುಡಿಗಳು
ಕೊಬ್ಬರಿಬೆಲ್ಲದಂತ ಲಜ್ಜೆಗಳು
ಸಕ್ಕರೆಯಚ್ಚಿನಂತ ಮುಗುಳು
ಎದೆಯಂಗಳಕೆ ಬೀರಿಹೋದಳು..
ಜೀವವಾಯ್ತು ಅಕ್ಷರಶಃ ತಿಂಗಳು
ಭಾವವಾಯ್ತು ನಿತ್ಯ ಬೆಳದಿಂಗಳು.!

ಎಸ್. ದುರಗಪ್ಪ. ಕುಷ್ಟಗಿ.

■ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಪಟ್ಟಣದ ತಹಸೀಲ್ದಾರ ಕಾರ್ಯಾಲಯದ ಸಭಾಂಗಣದಲ್ಲಿ ವಿವಿಧ ಕಾರ್ಯಕ್ರಮಗಳ ಸಿದ್ಧತೆಗಾಗಿ ಪೂರ್ವಭಾವಿ ಸಭೆ ತಹಸಿಲ್ದಾರ್ ಡಾ.ವಿನಯಾ ಹೂಗಾರ ಅವರ ಅಧ್ಯಕ್ಷತೆಯಲ್ಲಿ ಇಂದು ನಡೆಯಲಿದೆ. ಜನೆವರಿ 26 ರಂದು ನಡೆಯಲಿರುವ ಗಣ–ರಾಜ್ಯೋತ್ಸವದ ಕುರಿತು ಚರ್ಚಿಸಲು ಪಟ್ಟಣದ ಗಣ್ಯರ ಸಭೆ ಬೆಳಿಗ್ಗೆ 11 ಗಂಟೆಗೆ ನಡೆಯಲಿದೆ. ಇಂದೇ ಮಧ್ಯಾಹ್ನ 3–00 ಘಂಟೆಗೆ ದಿನಾಂಕ 21–01–2026 ರಂದು ಆಚರಸಲಿರುವ ಅಂಬಿಗರ ಚೌಡಯ್ಯ ಹಾಗೂ ದಿ.25–01–2026ರಂದು ಆಚರಿಸಲಿರುವ ಸವಿತಾ ಮಹರ್ಷಿ ಅವರ ಜಯಂತಿ ಕುರಿತು ಚರ್ಚಿಸಲು ಆಯಾ ಸಮಾಜಗಳ ಪ್ರಮುಖರ ಹಾಗೂ ಗಣ್ಯರ ಸಭೆ ನಡೆಯುವುದು ಸದರಿ ಸಭೆಗಳಲ್ಲಿ ಎಲ್ಲರೂ ಸಕಾಲಕ್ಕೆ ಭಾಗವಹಿಸಿ ತಮ್ಮ ಸಲಹೆ ಸೂಚನೆಗಳನ್ನು ನೀಡಬೇಕೆಂದು ತಹಸಿಲ್ದಾರ್ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಗುರಿ ತಲುಪಲು ಆತ್ಮವಿಶ್ವಾಸವೇ ದಾರಿದೀಪ : ಜ್ಞಾನಜ್ಯೋತಿ ಕಾಲೇಜಿನಲ್ಲಿ ಹೃದಯಸ್ಪರ್ಶಿ ಬೀಳ್ಕೊಡುಗೆ



■ ನೈಜ್ಯ ದೆಸೆ ನ್ಯೂಸ್

ಸಿಂಧನೂರು: "ಬದುಕಿನ ಪಯಣದಲ್ಲಿ ನಾವು ಎದುರಿಸುವ ಸವಾಲುಗಳಿಗಿಂತ ನಮ್ಮಲ್ಲಿರುವ ಆತ್ಮವಿಶ್ವಾಸ ದೊಡ್ಡದಾಗಿರಲಿ. ಸಮಯಪ್ರಜ್ಞೆ ಮತ್ತು ಕಠಿಣ ಪರಿಶ್ರಮವನ್ನು ಮೈಗೂಡಿಸಿಕೊಂಡರೆ ಜಗತ್ತನ್ನೇ ಗೆಲ್ಲಬಹುದು," ಎಂದು ಗಂಗಾವತಿಯ ಎಸ್‌ಕೆಆರ್ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಶಿವಾನಂದ ಮೇಟಿ ಹೇಳಿದರು.ನಗರದ ಜ್ಞಾನಜ್ಯೋತಿ ವಿಜ್ಞಾನ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.ಶಿಕ್ಷಣ ಎಂಬುದು ಕೇವಲ ಅಂಕಗಳಿಕೆಗೆ ಸೀಮಿತವಾಗಬಾರದು. ಅದು ಬದುಕಿನ ಪ್ರತಿ ಹಂತದಲ್ಲೂ ದಾರಿ ತೋರುವ ಬೆಳಕಾಗಬೇಕು. ಸೋಲಿಗೆ ಎದೆಗುಂದದೆ, ಸಮಾಜದ ಏಳಿಗೆಗೆ ಪೂರಕವಾಗಿ ವಿದ್ಯಾರ್ಥಿಗಳು ತಮ್ಮ ಜ್ಞಾನವನ್ನು ಬಳಸಿಕೊಳ್ಳಬೇಕು ಎಂದು ಅವರು ಕಿವಿಮಾತು ಹೇಳಿದರು.ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಗಂಗಾವತಿಯ ನ್ಯಾಯವಾದಿ ನಾಗರಾಜ ಗುತ್ತೇದಾರ್ ಮಾತನಾಡಿ, "ವಿದ್ಯಾರ್ಥಿ ದೆಸೆಯಲ್ಲಿ ಶಿಸ್ತು ಮತ್ತು ಸಂಸ್ಕೃತಿ ಅತ್ಯಗತ್ಯ. ಪೋಷಕರನ್ನು ಗೌರವಿಸುವ ಮತ್ತು ದೇಶದ ಬಗ್ಗೆ ಹೆಮ್ಮೆ ಪಡುವ ಗುಣಗಳು ನಮ್ಮನ್ನು ಎತ್ತರಕ್ಕೆ ಕೊಂಡೊಯ್ಯುತ್ತವೆ," ಎಂದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಎನ್.ಪಿ. ವಿಷ್ಣುವರ್ಧನ್ ರೆಡ್ಡಿ ಮಾತನಾಡಿ, ಕಠಿಣ ಪರಿಶ್ರಮದ ಜೊತೆಗೆ ಸಾಮಾಜಿಕ ಬದ್ಧತೆಯನ್ನು ಬೆಳೆಸಿಕೊಂಡಾಗ ಮಾತ್ರ ಶಿಕ್ಷಣ ಸಂಸ್ಥೆ ಹಾಗೂ ಪೋಷಕರಿಗೆ ನಿಜವಾದ ಕೀರ್ತಿ ಲಭಿಸಲು ಸಾಧ್ಯ ಎಂದು ಹಾರೈಸಿದರು.ಕಾಲೇಜಿನ ಶೈಕ್ಷಣಿಕ ಸಾಧನೆಗಳ ಕುರಿತು ಹಿಂದಿ ಉಪನ್ಯಾಸಕ ಚಾಂದ್ ಪಾಷಾ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದ ನಂತರ ವಿದ್ಯಾರ್ಥಿಗಳಿಂದ ನಡೆದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಎಲ್ಲರ ಗಮನ ಸೆಳೆದವು. ಸಮಾರಂಭದಲ್ಲಿ ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು..........

# ಪ್ಲಾಸ್ಟಿಕ್ ಚೀಲಕ್ಕೆ ಹೊಸ ರೂಪ ನೀಡಿದ ಮಸ್ಕಿ ಅಂಗನವಾಡಿ ಸಹಾಯಕಿಯರು




■ ನೈಜ್ಯ ದೆಸೆ ನ್ಯೂಸ್

ಮಸ್ಕಿ: ಕಸದಿಂದ ರಸ ಹೇಗೆ ತೆಗೆಯಬೇಕು ಎಂಬುದನ್ನು ಚೆನ್ನಾಗಿ ಕರಗತ ಮಾಡಿಕೊಂಡಿರುವ ಮಸ್ಕಿ ಪಟ್ಟಣದ ಅಂಗನವಾಡಿ ಸಹಾಯಕಿಂ–ರು, ಸ್ಥಳೀಯವಾಗಿ ಅಂಗನವಾಡಿ ಕೇಂದ್ರದಲ್ಲಿ ಲಭ್ಯವಿರುವ ಉಪಯೋಗಕ್ಕೆ ಬಾರದ ಪ್ಲಾಸ್ಟಿಕ್ ಚೀಲದಿಂದ ಆಕರ್ಷಕ ಪರಿಸರಸ್ನೇಹಿ ದಿನಬಳಕೆಯ ವಸ್ತುಗಳನ್ನು ತಯಾರಿಸಿ ಎಲ್ಲರು ಗಮನ ಸೆಳೆದಿದ್ದಾರೆ.ಇದೀಗ ಮತ್ತೊಂದು ಹೆಜ್ಜೆ ಮುಂದಿಟ್ಟು, ಅಂಗನವಾಡಿ ಕೇಂದ್ರದಲ್ಲಿ ಪ್ಲಾಸ್ಟಿಕ್ ಚೀಲಗಳು ಸಂಗ್ರಹಿಸಿ ಹೊಸ ರೂಪ ನೀಡಿ ಮತ್ತೆ ದಿನಬಳಕೆಯ ವಸ್ತುವನ್ನಾಗಿ ಪರಿವರ್ತಿಸುತ್ತಿದ್ದಾರೆ.ಪರಿಸರಸ್ನೇಹಿ ಚೀಲ ಪ್ಲಾಸ್ಟಿಕ್ ತಯಾರಿಸಿದ ಈ ಕೈ ಚೀಲಗಳು ಗುಣಮಟ್ಟದಲ್ಲೂ ಉತ್ತಮವಾಗಿದ್ದು, ಮರುಬಳಕೆಗೆ ಯೋಗ್ಯವಾಗಿವೆ. ಮಹಿಳೆಯರು ತಯಾರಿಸಿದ ಪ್ಲಾಸ್ಟಿಕ್ ಚೀಲಗಳನ್ನು ಶನಿವಾರ ಸಾರ್ವಜನಿಕ ಮಹಿಳೆಯರಿಗೆ ಪ್ಲಾಸ್ಟಿಕ್ ಚೀಲದಿಂದ ವಿವಿಧ ಬಗೆಯ ಹೆಚ್ಚಿನ ಖರ್ಚು ಇಲ್ಲದೆ ಚೀಲ ಮಾಡಬಹುದು. ಮಸ್ಕಿ ಅಂಗನವಾಡಿ ಮೇಲ್ವಿಚಾರಕ್ಕಿ ಶಿವಲೀಲಾ ಹಿರೇಮಠ ಅವರ ನೇತೃತ್ವದಲ್ಲಿ ತರಬೇತಿ ಪಡೆದ ಮಹಿಳೆಯರು ಕಸದಿಂದ ರಸತೆಗೆಯುವ ಕೆಲಸ ಮಾಡಿದ್ದಾರೆ.ಪ್ಲಾಸ್ಟಿಕ್ ಚೀಲಗಳನ್ನು ಬಳಸಲು ನಾನಾ ರೀತಿಯ ಸೃಜನಶೀಲ ವಿಧಾನಗಳಿವೆ, ಕ್ರಿಯೆಟಿವಿಟಿ ಮತ್ತು ತಾಳ್ಮೆಯಿದ್ದರೆ ಇವುಗಳಲ್ಲಿ ಬಹುತೇಕ ತ್ಯಾಜ್ಯ ವಸ್ತುಗಳಿಗೆ ಹೊಸ ರೂಪ ನೀಡಲು ಸಾಧ್ಯವಿದೆ. ಇವುಗಳನ್ನು ಉಪಯುಕ್ತ ವಸ್ತುಗಳನ್ನಾಗಿ ಮಾರ್ಪಡಿಸಿ ಮನೆಯಲ್ಲಿ ಉಪಯೋಗಿಸಿ ಖರ್ಚು ಕಡಿಮೆ ಮಾಡಬಹುದು ಎಂದು ಶಿವಲೀಲಾ ಅಂಗನವಾಡಿ ಮೇಲ್ವಿಚಾರಕ್ಕಿ ಮಸ್ಕಿ ಇವರು ತಿಳಿಸಿದರು.

# ಕೇಮಶೆಟ್ಟಿಗೆ ಯುವ ನಾಯಕ ಪುರಸ್ಕಾರ

■ ನೈಜ್ಯ ದೆಸೆ ನ್ಯೂಸ್

ತಾಳಿಕೋಟೆ: ದೃಶ್ಯಬಿಂಬ ಕಲಾ ಪ್ರತಿಷ್ಠಾನ (ರಿ) ಸಂಸ್ಥೆಯ ಅಧ್ಯಕ್ಷ ಸತೀಶ ಕೇಮಶೆಟ್ಟಿ ಅವ–ರಿಗೆ “ಯುವ ನಾಯಕ ಪುರಸ್ಕಾರ – 2026” ದೊರೆತಿದೆ.‘ರಾಷ್ಟ್ರೀಯ ಯುವ ದಿನಾಚರಣೆ’ ಅಂಗವಾಗಿ ನಾಗರಮುನ್ನೊಳ್ಳಿಯ ಕವಿತ್ತ ಕರ್ಮಮಣಿ (ರಿ) ಫೌಂಡೇಶನ್ ವತಿಯಿಂದ ಪ್ರತಿ ವರ್ಷ ಕಲೆ, ಸಾಹಿತ್ಯ, ಶಿಕ್ಷಣ ಮತ್ತು ಸಾಮಾಜಿಕ ಸೇವೆಗಳಲ್ಲಿ ವಿಶಿಷ್ಟ ಸಾಧನೆ ಮಾಡಿರುವ ಯುವ ಪ್ರತಿಭಾವಂತರನ್ನು ಗುರುತಿಸಿ ಗೌರವಿಸುವ ಕಾರ್ಯಕ್ರಮ ನಡೆಯುತ್ತದೆ. ಈ ಹಿನ್ನೆಲೆಯಲ್ಲಿ ಇದೆ ಜ.25ರಂದು ನಾಗರಮುನ್ನೊಳ್ಳಿಯಲ್ಲಿ ನಡೆಯುವ ಸಮಾರಂಭದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಯುವ ಪೀಳಿಗೆಯಲ್ಲಿ ಕಲೆ–ಸಂಸ್ಕೃತಿ ಅರಿವು ಬೆಳೆಸುವುದು, ಸರ್ಕಾರ ಮತ್ತು ಖಾಸಗಿ ಸಂಸ್ಥೆಗಳಲ್ಲಿ ಕಲಾ ಕಾರ್ಯಕ್ರಮಗಳನ್ನು ಪ್ರೋತ್ಸಾಹಿಸುವುದು, ಶಾಲಾ–ಕಾಲೇಜುಗಳಲ್ಲಿ ತರಬೇತಿ ಶಿಬಿರಗಳು ಮತ್ತು ಪ್ರದರ್ಶನಗಳು ಆಯೋಜಿಸುವುದು ಸೇರಿದಂತೆ ಹಲವು ಸಾಮಾಜಿಕ–ಶೈಕ್ಷಣಿಕ ಕಾರ್ಯಕ್ರಮಗಳ ಮೂಲಕ ಕೇಮಶೆಟ್ಟಿ ಅವರ ಸೇವೆಯನ್ನು ಗುರುತಿಸಿ ಈ ಪ್ರಶಸ್ತಿ ಗೌರವ ನೀಡಲಾಗುತ್ತಿದೆ ಎಂದು ಪ್ರಕಟಣೆ ತಿಳಿಸಿದೆ.



# 6 ಲಕ್ಷ ರು. ಖರ್ಚು ಮಾಡಿ ಕೊಟ್ಟ ಮಾತಿನಂತೆ ಅಪ್ಪ– ಅಮ್ಮರನ್ನು ಹೆಲಿಕ್ಯಾಪ್ಟರ್‌ನಲ್ಲಿ ಸುತ್ತಾಡಿಸಿದ ಸುಪುತ್ರ




■ ನೈಜ್ಯ ದೆಸೆ ನ್ಯೂಸ್

ಸಿಂಧನೂರು : 6 ಲಕ್ಷ ರು. ಖರ್ಚು ಮಾಡಿ ಕೊಟ್ಟ ಮಾತಿನಂತೆ ಅಪ್ಪ– ಅಮ್ಮರನ್ನು ಹೆಲಿಕ್ಯಾಪ್ಟರ್‌ನಲ್ಲಿ ಸುತ್ತಾಡಿಸಿದ ಸುಪುತ್ರ ಎಲ್ಲರ ಗಮನ ಸೆಳೆದಿದ್ದಾರೆ. ಸ್ಥಳೀಯ ಅಬ್ದುಲ್ ಜನತಾ ಕಾಲೋನಿಯ ಯುವಕ ತಮ್ಮ ತಂದೆ ತಾಯಿಯವರು ಹಿಂದೆ ನಾವು ಬೆಂಗಳೂರು ಮುಖಾಂತರ ಸಿಂಧನೂರಿನಲ್ಲಿ ಹೆಲಿಕ್ಯಾಪ್ಟರ್ ಮುಖಾಂತರ ಮೇಲುಗಡೆ ಸುತ್ತಾಡಬೇಕು ಎಂಬ ಆಸೆ ಇಟ್ಟಿದ್ದರು ಎಂದು ಮಗನ ಬಳಿ ಹೇಳಿದ್ದಾರೆ.ಪೋಷಕರ ಆಸೆಯಂತೆ ಖಾಸಗಿ ಉದ್ಯೋಗಿ, ಜನತಾ ಕಾಲೋನಿ ನಿವಾಸಿ ಅಬ್ದುಲ್ ತಮ್ಮ ತಂದೆ ತಾಯಿಯವರನ್ನು ಸೇರಿಕೊಂಡು ತಮ್ಮ ಕುಟುಂಬದವರನ್ನು ಹೆಲಿಕ್ಯಾಪ್ಟರ್ ಮುಖಾಂತರ ಸಿಂಧನೂರು ತುಂಬಾ ಸುತ್ತಾಡಿರುವುದು ಶನಿವಾರ ಕಂಡು ಬಂತು.6 ಲಕ್ಷ ರೂಪಾಯಿ ಖರ್ಚು ವಾರ್ಡ್ ನಂಬರ್ 25 ರ ಜನತಾ ಕಾಲೋನಿಯ ನಿವಾಸಿಗಳಾದ ಶರೀಫ್ ಸಾಬ್ ಇವರ ಧರ್ಮಪತ್ನಿ ಸಜಾದಿ ಬೇಗ ಇವರನ್ನು ಇವರ ಮೊದಲ ಮಗ ಅಬ್ದುಲ್ 6 ಲಕ್ಷ ರೂಪಾಯಿ ಖರ್ಚು ಮಾಡಿ ಇವರ ಆಸೆಯಂತೆ ಬೆಂಗಳೂ–ರಿನಿಂದ ಸಿಂಧನೂರುವರೆಗೆ ಹೆಲಿಕ್ಯಾಪ್ಟರ್ ಮುಖಾಂತರ ಆಗಮಿಸಿ, ಇಲ್ಲಿಯ ಸ್ಥಳೀಯ ಎಲ್ಲಾ ತಾಣಗಳನ್ನು ತಂದೆ–ತಾಯಿ ಹಾಗೂ ಅವರ ಕುಟುಂಬದವರಿಗೆ ತೋರಿಸಿ ಆಸೆಯನ್ನು ಈಡೇರಿಸಿದ ಮಗ ಆಗಿದ್ದಾನೆ. ಇವರ ಪ್ರೀತಿಗೆ ಸಿಂಧನೂರು ಜನತೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.ಅಬ್ದುಲ್ ಇವರು ಸಣ್ಣಪುಟ್ಟ ಕೆಲಸ ಮಾಡಿಕೊಂಡು ರಿಯಲ್ ಎಸ್ಟೇಟ್‌ನಲ್ಲಿ ತಮ್ಮ ಸಾಮರ್ಥ್ಯ ತೋ–ರಿಸ್ಕೊಂಡು ಜೀವನ ಸಾಗಿಸುವ ಕೆಲಸದಲ್ಲಿ ಇದ್ದಾರೆ, ಇವರ ತಂದೆ ತಾಯಿಯವರು ಆಸೆ ಪಟ್ಟಂತೆ ಹೆಲಿಕ್ಯಾಪ್ಟರ್ ನಲ್ಲಿ ಸುತ್ತಾಡಿಸಿದ್ದು ಇತರರಿಗೆ ಮಾದರಿ ಆಗಿದ್ದಾರೆ.

# ಪಕ್ಷಿಗಳು ಪೂರಕ ವಾತಾವರಣ ನಿರ್ಮಿಸುವಲ್ಲಿ ಮಹತ್ತರ ಪಾತ್ರ ವಲಯ ಅರಣ್ಯ ಅಧಿಕಾರಿ ರಾಜೇಶ್ ನಾಯಕ



■ ನೈಜ್ಯ ದೆಸೆ ನ್ಯೂಸ್

ರಾಯಚೂರು: 'ಪಕ್ಷಿಗಳು ಉತ್ತಮ ಪರಿಸರದ ಸಂಕೇತವಾಗಿವೆ. ಅವು ಪೂರಕ ವಾತಾವರಣ ನಿರ್ಮಿಸುವಲ್ಲಿ ಮಹತ್ತರ ಪಾತ್ರ ವಹಿಸುತ್ತವೆ' ಎಂದು ವಲಯ ಅರಣ್ಯ ಅಧಿಕಾರಿ ರಾಜೇಶ್ ನಾಯಕ ಅಭಿಪ್ರಾಯಪಟ್ಟರು.ಪ್ರಯತ್ನ ವೆಲ್‌ಫೇರ್ ಟ್ರಸ್ಟ್ ವತಿಯಿಂದ ನಗರದ ಟ್ಯಾಗೋರ್ ಸಭಾಂಗಣದಲ್ಲಿ ಏರ್ಪಡಿಸಿದ್ದ ಈರಣ್ಣ ಬೆಂಗಾಲಿ ಅವರು ತಮ್ಮ ಕ್ಯಾಮೆರಾದಲ್ಲಿ ಸೆರೆ ಹಿಡಿದ ರಾಯಚೂರು ಪಕ್ಷಿಗಳ ಎರಡು ದಿನಗಳ ಫೋಟೊ ಪ್ರದರ್ಶನ ಉದ್ಘಾಟಿಸಿ ಅವರು ಮಾತನಾಡಿದರು.'ಪಕ್ಷಿಗಳು ಭೂ ಲೋಕದ ಅದ್ಭುತ ಜೀವಿಗಳಾಗಿ, ಮನುಕುಲಕ್ಕೆ ಸಹಕಾರಿಯಾಗಿವೆ. ವಿದ್ಯಾರ್ಥಿಗಳು, ಸಾರ್ವಜನಿಕರು ಪಕ್ಷಿಗಳನ್ನು ಉಳಿಸುವತ್ತ ಗಮನಹ–ರಿಸಬೇಕು' ಎಂದು ಹೇಳಿದರು.ಪಕ್ಷಿ ಛಾಯಾಗ್ರಾಹಕ ಈರಣ್ಣ ಬೆಂಗಾಲಿ ಮಾತನಾಡಿ, 'ರಾಯಚೂರಿನಲ್ಲಿ ಇನ್ನೂರಕ್ಕೂ ಅಧಿಕ ಪ್ರಬೇಧದ ಹಕ್ಕಿಗಳಿವೆ. ಅವುಗಳನ್ನು ಉಳಿಸಿಕೊಂಡು ಹೋಗುವ ಪ್ರಯತ್ನ ಆಗಬೇಕಿದೆ. ಜನರು ಹಕ್ಕಿಗಳ ಬಗ್ಗೆ ಒಲವು ಹೊಂದಿ, ಪಕ್ಷಿಗಳ ಮಹತ್ವ ಅರಿಯಬೇಕು' ಎಂದರು. ಅಧ್ಯಕ್ಷತೆ ವಹಿಸಿದ್ದ ಅಭಿಜ್ಞಾನ ಶಾಲೆಯ ರಮೇಶ ಮಾತನಾಡಿ, 'ಈರಣ್ಣ ಬೆಂಗಾಲಿ ಅವರು ರಾಯಚೂರಿನ ಪಕ್ಷಿಗಳ ಫೋಟೊ ತೆಗೆದು ಅವುಗಳನ್ನು ಪರಿಚಯಿಸಿದ್ದು, ಅಭಿನಂದನೀಯ. ಪರಿಸರ ಕಾರ್ಯಕ್ಕೆ ನಾವು ಯಾವಾಗಲೂ ಜೊತೆ ಇರಬೇಕು. ಉತ್ತಮ ಪರಿಸರವನ್ನು ನಾವು ಕಾಪಾಡುವಲ್ಲಿ ಗಮನಹ–ರಿಸಬೇಕು. ಪಕ್ಷಿಗಳು ಇರದಿದ್ದರೆ ನಾವಿಲ್ಲ ಎಂಬುದನ್ನು ಮರೆಯಕೂಡದು' ಎಂದು ಹೇಳಿದರು.ಮೊಹಿಯುದ್ದೀನ್ ಪೀರಜಾದೆ, ವೀರಹನುಮಾನ, ನೀಲಕಂಠ ಮಳಿಮಠ, ಈರಣ್ಣ ಕೋಸಗಿ, ಹಫಿಜುಲ್ಲಾ, ಬಶೀರಅಹ್ಮದ ಹೊಸಮನಿ, ಪ್ರಭಣ್ಣಗೌಡ, ಬಸವಂತರಾಯ ಪಾಟೀಲ, ಸಲಾವುದ್ದೀನ್, ಅಜಯ್, ಮುನಿಸ್ವಾಮಿ, ಯಲ್ಲಪ್ಪ ಮರ್ಚೆಡ್ ಸೇರಿದಂತೆ ಅಭಿಜ್ಞಾನ ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



## ನೇಮಕಾತಿ ಪ್ರಕಟಣೆ

KSRLPS ನೇಮಕಾತಿ 2026 □ 11 ಕ್ಲಸ್ಟರ್ ಮೇಲ್ವಿಚಾರಕರು, ಕಚೇರಿ ಸಹಾಯಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಏಖಖಐಕಖ ನೇಮಕಾತಿ 2026: 11 ಕ್ಲಸ್ಟರ್ ಮೇಲ್ವಿಚಾರಕರು, ಕಚೇರಿ ಸಹಾಯಕರು, ಬ್ಲಾಕ್ ವ್ಯವಸ್ಥಾಪಕರು, ಜಿಲ್ಲಾ ವ್ಯವಸ್ಥಾಪಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಪ್ರಚಾರ ಸಂಘವು ಜನವರಿ 2026 ರ ಏಖಖಐಕಖ ಅಧಿಕೃತ ಅಧಿಸೂಚನೆಯ ಮೂಲಕ ಬ್ಲಾಕ್ ವ್ಯವಸ್ಥಾಪಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕೋಲಾರ, ಮಾಲೂರು, ಮುಳಬಾಗಿಲು, ಬಂಗಾರಪೇಟೆ, ಶ್ರೀನಿವಾಸಪುರ □ ಕರ್ನಾಟಕದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ಜನವರಿ 30, 2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 15-01-2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30-ಜನವರಿ-2026 ಅಧಿಕೃತ ವೆಬ್‌ಸೈಟ್: ksrlps.karnataka.gov.in

## ಅಲೆಮಾರಿ ಸಮುದಾಯಗಳಿಗೆ ಒಳ ಮೀಸಲಾತಿ ನೀಡುವಲ್ಲಿ ಅನ್ಯಾಯವಾಗುವುದಿಲ್ಲ:ಎನ್.ಎಸ್.ಬೋಸರಾಜು



■ ನೈಜ್ಯ ದೆಸೆ ನ್ಯೂಸ್

ಮಾನ್ವಿ: ಪಟ್ಟಣದ ಶ್ರೀ ಸತ್ಯಸಾಯಿ ಗಾರ್ಡನ್‌ನಲ್ಲಿ ಕರ್ನಾಟಕ ರಾಜ್ಯ ಅಲೆಮಾರಿ ಪ.ಜಾ. ಚನ್ನದಾಸರ್, ಹೊಲೆಯಾದಾಸರ್, ಮಾಲದಾಸರಿ ಕ್ಷೇಮಾಭಿವೃದ್ಧಿ ಸಂಘ ಬೆಂಗಳೂರು ವತಿಯಿಂದ ನಡೆದ ಅಲೆಮಾ-ರಿಗಳ ಬೃಹತ್ ಸಾಂಸ್ಕೃತಿಕ ಕಲಾ ಪ್ರದರ್ಶನ ಮತ್ತು ಸ್ವಾಭಿಮಾನ ಸಮಾವೇಶವನ್ನು ರಾಜ್ಯ ಸಣ್ಣ ನೀರಾವರಿ ಮತ್ತು ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಉದ್ಘಾಟಿಸಿ ಮಾತನಾಡಿ ದೇಶದಲ್ಲಿ ಪ.ಜಾತಿ,ಪ.ಪಂಗಡ ಸಮುದಾಯಗಳ ಅಭಿವೃದ್ದಿಗಾಗಿ ಶೇ.17 ರಷ್ಟು ಒಳಮೀಸಲಾತಿಯನ್ನು ಕಲ್ಪಿಸುವ ಮೂಲಕ ಮೀಸಲಾತಿಯನ್ನು ಹೆಚ್ಚಾಳ ಮಾಡಿರುವುದು ಕರ್ನಾಟಕ ಮತ್ತು ತೆಲಂಗಾಣ ಸರ್ಕಾರಗಳು ಮಾತ್ರ ದೇಶದ ಉಳಿದ ರಾಜ್ಯಗಳಲ್ಲಿ ಇನ್ನು ಕೂಡ ಮೀಸಲಾತಿ ಹೆಚ್ಚಾಳ ಮಾಡಿಲ್ಲ ಮೀಸಲಾತಿ ಹೆಚ್ಚಳ ಮಾಡುವ ಸಮಯದಲ್ಲಿ ಸಮಾಜದಲ್ಲಿನ ಅತ್ಯಂತ ಸೂಕ್ಷ ಮತ್ತು ಅತಿ ಕಡಿಮೆ ಜನಸಂಖ್ಯೆಯನ್ನು ಹೊಂದಿರುವ ಅಲೆಮಾರಿ ಸಮುದಾಯಗಳಿಗೆ ಮಿಸಲಾತಿಯ ಹಂಚಿಕೆಯಲ್ಲಿ ಲೋಪದೋಷಗಳಾಗಿರುವುದು ನಮ್ಮ ರಾಜ್ಯ ಸರ್ಕಾರಕ್ಕೆ ಕಂಡುಬಂದಿರುವುದರಿಂದ 2 ಸಂಪುಟ ಸಭೆಯಲ್ಲಿ ಚರ್ಚೆ ನಡೆಸಲಾಗಿದ್ದು ಮುಂದಿನ ಒಂದು ತಿಂಗಳಲ್ಲಿ ನಡೆಯುವ 3 ನೇ ಸಚಿವ ಸಂಪುಟದಲ್ಲಿ ಅಲೇಮಾರಿ ಸಮುದಾಯಗಳಿಗೆ ಮೀಸಲಾತಿ ಹಂಚಿಕೆ ಮಾಡುವುದಕ್ಕೆ ಮುಖ್ಯಮಂತ್ರಿಗಳು ನಿರ್ಣಯ ಅಂಗಿಕರಿಸುವ ಮೂಲಲ ಸಂತೋಷದ ಸುದ್ದಿಯನ್ನು ನೀಡಲಿದ್ದಾರೆ ಅಲ್ಲಿಯವರೆಗೂ ಅಲೇಮಾರಿ ಸಮುದಾಯದವರು ತಾಳ್ಮೆಯನ್ನು ವಹಿಸಿ ವದಂತಿಗಳಿಗೆ ಕಿಗೊಡಬೇಡಿ ಸಮುದಾಯಗಳು ಸಂಘಟಿತವದಾಗ ಮಾತ್ರ ಹೋರಾಟ ಮಾಡಿ ಸರ್ಕಾರದಿಂದ ದೊರೆಯುವ ತಮ್ಮ ನ್ಯಾಯುತವಾದ ಹಕ್ಕುಗಳನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ ರಾಜ್ಯದಲ್ಲಿ ಅಲೆಮಾರಿ ಪ.ಜಾ. ಚನ್ನದಾಸರ್, ಹೊಲೆಯಾದಾಸರ್, ಮಾಲದಾಸರಿ ಸಮುದಾಯಗಳು ರಾಜ-ಕೀಯವಾಗಿ,ಆರ್ಥಿಕವಾಗಿ,ಸಮಾಜಿಕವಾಗಿ,ಅತ್ಯಂತ ಹಿಂದುಳಿದಿರುವ ರಾಜ್ಯದ ಇನ್ನೂ ಎರಡು ಸಮುದಾಯಗಳಿಗೆ ಮುಂದಿನ ದಿನಗಳಲ್ಲಿ ಅಭಿವೃದ್ದಿ ನಿಗಮಗಳನ್ನು ಸ್ಥಾಪನೆ ಮಾಡಲಾಗುವುದು. ರಾಯಚೂರು ನಗರ ಹಾಗೂ ಮಾನ್ವಿ ಪಟ್ಟಣದಲ್ಲಿ ಅಲೆಮಾರಿ ಸಾಂಸ್ಕೃತಿ-ಕ ಭವನ ನಿರ್ಮಾಣ, ಅಲೆಮಾರಿ ಗ್ರಂಥಾಲಯಕ್ಕೆ ಅಗತ್ಯವಾದ ಕ್ರಮ ಕೈಗೊಳ್ಳಲಾಗುವುದು ನಿಮ್ಮ ಬೇಡಿಕೆಗಳನ್ನು ಹಂತ,ಹಂತವಾಗಿ ಈಡೆರಿಸುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.ಕರ್ನಾಟಕ ರಾಜ್ಯ ಅಲೆಮಾರಿ ಪ.ಜಾ. ಚನ್ನದಾಸರ್, ಹೊಲೆಯಾದಾಸರ್, ಮಾಲದಾಸರಿ ಕ್ಷೇಮಾಭಿವೃದ್ದಿ ಸಂಘ ಬೆಂಗಳೂರು ರಾಜ್ಯಾಧ್ಯಕ್ಷರಾದ ಡಾ.ವಿ.ಚಲಪತಿ ಮಾತನಾಡಿ ಈ ದೇಶದ ಮೂಲ ನಿವಾಸಿಗಳಾಗಿ ಸದಾ ಅಲೆಮಾರಿಗಳಾಗಿ ಊರ ಹೋರಗಿನ ಗುಡಿಸಲುಗಳಲ್ಲಿ ವಾಸ ಮಾಡುತ್ತಿರುವ ಚನ್ನದಾಸರ್, ಹೊಲೆಯಾದಾಸರ್, ಮಾಲದಾಸರಿ ಅಲೇಮಾರಿ ಸಮುದಾಯಗಳು ಸದಾ ಹರಿನಾಮ ಸ್ಮರಣೆ ಮಾಡುತ್ತ ಜೀವನಕ್ಕಾಗಿ ಅಲೆಯುತ್ತ ಭೀಕ್ಷಾಟನೆ ಮಾಡುವ ಸಮುದಾಯ ರಾಜಕೀಯವಾಗಿ,ಸಾಮಾಜಿ-ಕವಾಗಿ,ಆರ್ಥಿಕವಾಗಿ ಅತ್ಯಂತ ಹಿಂದುಳಿದಿದ್ದರು ಕೂಡ ಒಳ ಮೀಸಲಾತಿಯಲ್ಲಿ ಶೇ1 ರ ವಿಶೇಷ ಸ್ಥಾನ ಮಾನವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ದೇಶದ ಸರ್ವೋಚ್ಚ ನ್ಯಾಯಾಲಯದ ಅದೇಶದ ನಂತರವು ನೀಡದೆ ಸಮುದಾಯವನ್ನು ಮೀಸಲಾತಿಯ ಸೌಲಾಭ್ಯಗಳಿಂದ ವಂಚಿಸುತ್ತಿದೆ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅಯೋಗವು ನೀಡಿರುವ ಒಳಮೀಸಲಾತಿ ವರದಿಯಂತೆ ನಮ್ಮ ಸಮುದಾಯದವರಿಗೆ ನ್ಯಾಯ ಒದಗಿಸಬೇಕು.ರಾಜ್ಯ ಸರ್ಕಾರವು ನಮ್ಮ ಸಮುದಾಯದ ಭೂರಹಿತ ಅಲೆಮಾರಿಗಳಿಗೆ ಭೂಮಿ,ವಸತಿ ನೀಡಬೇಕು, ಅಲೆಮಾರಿ ನಿಗಮ ಮಂಡಳಿ ರಚನೆ ಮಾಡಿ 5ನೂರು ಕೋಟಿ ಅನುದಾನ ನೀಡಬೇಕು, ಅಲೆಮಾರಿ ಸಮುದಾಯದವರ ಕಲೆಗಳ ಪ್ರದರ್ಶನಕ್ಕೆ ಸಾಂಸ್ಕೃತಿಕ ಭವನಗಳನ್ನು ನಿರ್ಮಾಣ ಮಾಡಿ ಮುಂದಿನ ಪೀಳಿಗೆಗೆ ನಮ್ಮ ಕಲೆಗಳ ಬಗ್ಗೆ ತರಬೇತಿ ನೀಡಬೇಕು,ಅಲೆಮಾರಿ ಸಮುದಾಯಗಳ ಕುಟುಂಬದಲ್ಲಿನ ಮಕ್ಕಳಿಗೆ ಜಿಲ್ಲಾ ಮಟ್ಟದ ವಸತಿ ನಿಲಯಗಳನ್ನು ಪ್ರಾರಂಭಿಸಬೇಕು,ತಾಂತ್ರಿಕ ಮತ್ತು ವೃತ್ತಿ ಶಿಕ್ಷಣ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ನೀಡುವ ತರಬೇತಿಯಲ್ಲಿ ಮೀಸಲಾತಿ ಕಲ್ಪಿಸಬೇಕು, ಅಲೆಮಾರಿ ಗ್ರಂಥಾಲಯಗಳನ್ನು ವಿಸ್ತ-ರಿಸಬೇಕು,ಅಲೆಮಾರಿ ಮಹಿಳೆಯರು ಸ್ವಾವಲಂಬಿ ಬದುಕಿಗಾಗಿ ಆರ್ಥಿಕ ನೆರವನ್ನು ನೀಡಬೇಕು ಎಂದು ಒತ್ತಾಯಿಸಿದರು.ಡಾ.ಬಿ.ಆರ್. ಅಂಬೇಡ್ಕರ್ ಪುತ್ತಳಿಗೆ ಶಾಸಕ ಹಂಪಯ್ಯನಾಯಕ ಮಾಲಾರ್ಪಣೆ ಮಾಡಿ ಮಾತನಾಡಿದರು, ಕರ್ನಾಟಕ ರಾಜ್ಯ ಅಲೆಮಾರಿ ಪ.ಜಾ. ಚನ್ನದಾಸರ್, ಹೊಲೆಯಾದಾಸರ್, ಮಾಲದಾಸರಿ ಕ್ಷೇಮಾಭಿವೃದ್ದಿ ಸಂಘ ಬೆಂಗಳೂರು ವತಿಯಿಂದ ಸಚಿವ ಎನ್.ಎಸ್.ಬೋಸರಾಜು ರವರಿಗೆ ರಾಜ್ಯ ಕಾರ್ಯದರ್ಶಿ ಮಹಾದೇವಪ್ಪ ವಿವಿಧ ಬೇಡಿಕೆಗಳನ್ನು ಈಡೆರಿಸುವಂತೆ ಮನವಿ ಪತ್ರವನ್ನು ನೀಡಿದರು.ಅಲೆಮಾರಿ ಸಮುದಾಯದ ಪ್ರಶಸ್ತಿ ಪುರಸ್ಕೃತರಿಗೆ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಲಾಯಿತು. ಅಲೆಮಾರಿ ಸಮುದಾಯದ ಕಲಾವಿದರಿಂದ ವಿವಿಧ ಕಲೆಗಳ ಪ್ರದರ್ಶನ ನಡೆಯಿತು.ಕರ್ನಾಟಕ ಜನಪದ ವಿಶ್ವವಿದ್ಯಾಲಯ ಗುತ್ತಗುಡಿಯ ಸಂಶೋಧನಾಧಿಕಾರಿ ಡಾ.ಮಲ್ಲಿಕಾರ್ಜುನ ಮಾನ್ವಡೆ ವಿಶೇಷವಾದ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಪ.ಜಾತಿ,ಪ.ಪಂಗಡ,ಅಲೆಮಾರಿ ಅಭಿವೃದ್ದಿ ನಿಗಮ ಬೆಂಗಳೂರಿನ ಅಧ್ಯಕ್ಷರಾದ ಜಿ.ಪಲ್ಲವಿ, ,ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕರಾದ ಬಸವನಗೌಡ ಬ್ಯಾಗವಾಟ, ಗಂಗಾಧರನಾಯಕ,ರಾಜಾ ವೆಂಕಟಪ್ಪ ನಾಯಕ, ಅಲೆಮಾರಿ ವಿಮುಕ್ತ ಬುಡಕಟ್ಟು ಮಹಾಸಭಾ ಬೆಂಗಳೂರಿನ ಜಂಟಿ ಕಾರ್ಯದರ್ಶಿ ಆನಂದಕುಮಾರ್ ಏಕಲವ್ಯ,ಹಿರಿಯ ದಲಿತ ಪರ ಹೋರಾಟಗಾರಾದ ಅಂಬಣ್ಣ ಅರೋಲಿಕರ್, ಎಸ್,ಮಾರೆಪ್ಪ, ಬಾಲಸ್ವಾಮಿ ಕೋಡ್ಲಿ ,ನಯೋಪ್ರ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್, ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಬಿ.ಕೆ.ಅಂಬರೇಶಪ್ಪ, ರಾಜಾ ಸುಭಶ್ಚಂದ್ರನಾಯಕ, ರಾಜ್ಯ ಯುವ ಘಟಕದ ಅಧ್ಯಕ್ಷರಾದ ಉಮೇಶ ಯಾಪಲಪರ್ವಿ , ರಾಜ್ಯ ಪ್ರಶಸ್ತಿ ಪುರಸ್ಕೃತ ಕಲಾವಿದರಾದ ಮಾರೆಪ್ಪ,ಬಿ,ಕೆ.ದಾಸರ್,ಹೆಚ್. ಕೆ.ದಾಸರ್, ಗೀರಿ,ಹೇಮರಾಜ, ಇಬ್ರಾಹಿಂ ಖುರೇಶಿ,ರಾಮಕೃಷ್ಣ-ಎಸ್,ವೆಂಕೋಬ,ನಾಗರತ್ನಮ್ಮ, ಲತಾ,ಶಿವರಾಜ ಜಾನೆಕಲ್, ಬುಡ್ಗ ಜಂಗಮ ರಾಜ್ಯ ಸಂಚಾಲಕರಾದ ಮಹಾಂತೇಶ್ ಸಿಕಲ್, ಬಿ,ನಾಗಪ್ಪ ಬಾಯಿದೊಡ್ಡಿ, ಎಸ್.ವೆಂಕೋಬ, ಯಲ್ಲಪ್ಪ,ಬಸವರಾಜ, ಪ್ರದೀಪ್ ,ರಮೇಶ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳ ಅಲೆಮಾರಿ ಸಮುದಾಯದವರು ಸಮಾವೇಶದಲ್ಲಿ ಭಾಗವಹಿಸಿದರು.

## ಕೋಲಾರ ಪಟ್ಟದೇವರು ಹಿರೇಮಠದ ಪರಮ ಪೂಜ್ಯ ಶೀ ಪ್ರಭುಕುಮಾರ ಶಿವಾಚಾರ್ಯ ಮಹಾಸ್ವಾಮಿಗಳಿಗೆ ಗೌರವ ಸಮರ್ಪಣೆ

■ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ : ತಾಲೂಕಿನ ಮೈಲೇಶ್ವರದ ಬ್ರಿಲಿಯಂಟ್ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಕಲಾ ವೈಭವ ಸಮಾರಂಭದ ಸಾನ್ನಿಧ್ಯ ವಹಿಸಿದ್ದ ಕೋಲಾರ ಪಟ್ಟದೇವರು ಹಿರೇಮಠದ ಪರಮ ಪೂಜ್ಯ ಶೀ ಪ್ರಭುಕುಮಾರ ಶಿವಾಚಾರ್ಯ ಮಹಾಸ್ವಾಮಿಗಳಿಗೆ ಗೌರವ ಸಮರ್ಪಣೆ ಸಲ್ಲಿಸಲಾಯಿತು. ಸಂಸ್ಥೆಯ ಅಧ್ಯಕ್ಷ ಎನ್.ಬಿ.ನಡುವಿನಮನಿ,ಬಿಇಓ ಬಿ.ಎಸ್.ಸಾವಳಗಿ, ಕ್ಷೇತ್ರ ಸಮನ್ವಯಾಧಿಕಾರಿ ಆರ್ ಬಿ ದಮ್ಮೂರಮಠ,ಇಸಿಓ ಸುರೇಶ ಹಿರೇಮಠ ಹಾಗೂ ಸರ್ವಜ್ಞವಿದ್ಯಾಪೀಠದ ಅಧ್ಯಕ್ಷ ಸಿದ್ದನಗೌಡ ಮಂಗಳೂರ ಇದ್ದರು.



## ಬೆಸ್ಟ್ ಪಬ್ಲಿಕ್ ಶಾಲೆಯಲ್ಲಿ ಸುಗ್ಗಿ ಉತ್ಸವ ಆಚರಣೆ

■ ನೈಜ್ಯ ದೆಸೆ ನ್ಯೂಸ್

ಮಕರ ಸಂಕ್ರಾಂತಿ ಹಬ್ಬದ ಅಂಗವಾಗಿ ಹಾಲಾಪುರ ಗ್ರಾಮದ ಬೆಸ್ಟ್ ಪಬ್ಲಿಕ್ ಶಾಲೆಯಲ್ಲಿ ಸುಗ್ಗಿ ಉತ್ಸವ ಆಚರಿಸಲಾಯಿತು. ಜಂಗಮರಹಳ್ಳಿಯ ದಂಡಗುಂಡಪ್ಪ ತಾತ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ,'ನಾಡಿನ ಸಂಸ್ಕೃತಿ, ಸಂಪ್ರದಾಯ ಬಿಂಬಿಸುವ ಆಚರಣೆಗಳು ಗ್ರಾಮೀಣ ಭಾಗದಲ್ಲಿ ಹೆಚ್ಚಿನ ಮಹತ್ವ ಪಡೆದಿವೆ.ಆಧುನಿಕ ಕಾಲದಲ್ಲಿ ಗ್ರಾಮೀಣ ಪರಂಪರೆಯನ್ನು ಮುಂದಿನ ಪೀಳಿಗೆಗೆ ತಿಳಿಸುವುದು ಅಗತ್ಯ' ಎಂದರು.ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.ಮುಖ್ಯಶಿಕ್ಷಕ ರವಿಕುಮಾರ ತೋರಣದಿನ್ನಿ, ಸಂಸ್ಥೆಯ ಉಪಾಧ್ಯಕ್ಷ ಕೆ.ಶೇಖರಪ್ಪ, ಕಾರ್ಯದರ್ಶಿ ಸಿದ್ದು, ಮುಖಂಡರಾದ ಕೃಷ್ಣಕುಮಾರ, ಕುಪ್ಪಣ್ಣ, ದೇವೇಂದ್ರ ಕುಮಾರ ಹಾಗೂ ಮತ್ತಿತರರು ಉಪಸ್ಥಿತರಿದ್ದರು.ಸುಗ್ಗಿ ಉತ್ಸವದಲ್ಲಿ ಮಕ್ಕಳು ನೃತ್ಯ ಮಾಡಿದರು



## ಶ್ರೀ ಶಿವಾಲಯ ದೇವಸ್ಥಾನ ಆವರಣದಿಲ್ಲಿ ಉಚಿತ ಆರೋಗ್ಯ ತಪಾಸಣಾ



■ ನೈಜ್ಯ ದೆಸೆ ನ್ಯೂಸ್

ಸಿಂಧನೂರು : ಜ 18 ಶ್ರೀ ಶಿವಾಲಯ ದೇವಸ್ಥಾನ ಆವರಣ ಲಕ್ಷ್ಮಿ ಕ್ಯಾಂಪ್ ವಾರ್ಡ್ ನಂಬರ್ 31 ಸಿಂಧನೂರಿನಲ್ಲಿ ಆಯೋಜಿಸಿರುವ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಕಾಕತಿಯ ಕಮ್ಮವರಿ ಸಂಘ ಪಿ ಡಬ್ಲ್ಯೂ ಡಿ ಕ್ಯಾಂಪ್, ಸನ್ ರೈಸ್ ಶಿಕ್ಷಣ ಸಮೂಹ ಸಂಸ್ಥೆಗಳು ಡಿ-ಫಾರ್ಮಸಿ, ನರ್ಸಿಂಗ್,ಪ್ಯಾರಾಮೆಡಿಕಲ್ ಹಾಗೂ ವೈ ಮಹಾಬಲೇಶ್ವರಪ್ಪ ಮೆಮೋರಿಯಲ್ ಕಣ್ಣಿನ ಕೇಂದ್ರ ಬಳ್ಳಾರಿ ಯೂನಿಟ್ ಆಫ್ ಎ ವಿ ಪ್ರಸಾದ್ ಇನ್ಸಿಟ್ಯೂಟ್ ಹೈದರಾಬಾದ್ ಇವರ ಸಂ-ಯುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಸಪ್ತಗಿರಿ ಆಸ್ಪತ್ರೆ ಬೆಂಗಳೂರಿನ ವೈದ್ಯರಿಂದ ಉಚಿತ ಹೃದಯ ರೋಗ ನರ ರೋಗ,ಕ್ಯಾನ್ಸರ್,ಮೂತ್ರಪಿಂಡ ಕಲ್ಲು ಕಾಯಿಲೆಗಳ ತಪಾಸಣಾ ಶಿಬಿರ ಹಾಗೂ ಕಣ್ಣು ಪರೀಕ್ಷೆಗಳನ್ನು ಮತ್ತು ಕಣ್ಣಿನ ಶಸ್ತ್ರ ಚಿಕಿತ್ಸೆಗೆ ರೋಗಿಗಳನ್ನು ಆಯ್ಕೆ ಮಾಡಲಾಯಿತು.ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಇಸಿಜಿ,ಎಕೋ ಮುಂತಾದ ಆರೋಗ್ಯ ತಪಾಸಣೆಗಳನ್ನು ಉಚಿತವಾಗಿ ಮಾಡಲಾಯಿತು, 350ಕ್ಕೂ ಹೆಚ್ಚಿನ ರೋಗಿಗಳ ತಪಾಸಣೆ ಮಾಡಲಾಯಿತು ಹೆಚ್ಚಿನ ಚಿಕಿತ್ಸೆ ಅವಶ್ಯಕತೆ ಇರುವ ರೋಗಿಗಳನ್ನು ಸಪ್ತಗಿರಿ ಆಸ್ಪತ್ರೆ ಬೆಂಗಳೂರು ಇಲ್ಲಿಗೆ ಶಿಫಾರಸು ಮಾಡಲಾಯಿತು ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ 350ಕ್ಕೂ ಹೆಚ್ಚು ರೋಗಿಗಳು ತಪಾಸಣೆಗೆ ಒಳಪಟ್ಟು ಅದರಲ್ಲಿ 20 ಜನರನ್ನು ಹೆಚ್ಚಿನ ಚಿಕಿತ್ಸೆಗಾಗಿ ಸಪ್ತಗಿರಿ ಆಸ್ಪತ್ರೆಗೆ ಕಳಿಸಿಕೊಡಲಾಯಿತು 50 ಜನ ರೋಗಿಗಳನ್ನು ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸೆಗಾಗಿ ವೈ ಮಹಾಬಲೇಶ್ವರಪ್ಪ ಮೆಮೋರಿಯಲ್ ಕಣ್ಣಿನ ಕೇಂದ್ರ ಬಳ್ಳಾರಿ ಇಲ್ಲಿಗೆ ಶಿಫಾರಸು ಮಾಡಲಾಯಿತು,ಉಚಿತ ಆರೋಗ್ಯ ತಪಾಸಣಾ ಶಿಬಿರದ ಉಸ್ತುವಾರಿಯನ್ನು ಚಿಟ್ಟೂರು ಶ್ರೀನಿವಾಸ್ ( ವಾಸು) ವಹಿಸಿಕೊಂಡು ಅಚ್ಚುಕಟ್ಟಾಗಿ ಶಿವಾಲಯ ದೇವಸ್ಥಾನದಲ್ಲಿ ನಡೆದ ಉಚಿತ ಆರೋಗ್ಯ ಶಿಬಿರದ ಕೆಲಸಗಳನ್ನು ಅತ್ಯಂತ ಹಚ್ಚುಕಟ್ಟಾಗಿ ತಮ್ಮ ಮನೆಯ ಕೆಲಸದ ಹಾಗೆ ಮುಂದೆ ನಿಂತು ನೆರವೇರಿಸಿದರು ಹಾಗೂ ಅನೇಕ ಸಾಮಾಜಿಕ ಕೆಲಸಗಳಲ್ಲಿ ತೊಡಗಿಸಿಕೊಳ್ಳುವ ಇವರು ಇವತ್ತಿನ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಾಗೂ ಉಚಿತ ಕಣ್ಣಿನ ತಪಾಸಣಾ ಶಿಬಿರದಲ್ಲಿ ಬಂದಂತ ರೋಗಿಗಳಿಗೆ ಮಾರ್ಗದರ್ಶನವನ್ನು ನೀಡುತ್ತಾ ಅಚ್ಚುಕಟ್ಟಾಗಿ ಕಾರ್ಯವನ್ನು ನಿರ್ವಹಿಸಿದರು. ಇದೇ ಸಂದರ್ಭದಲ್ಲಿ ಸನ್ ಗ್ರೂಪ್ ಆಫ್ ಇನ್ಸಿಟ್ಯೂಷನ್ ವಿದ್ಯಾರ್ಥಿಗಳು ಸಪ್ತಗಿರಿ ಆಸ್ಪತ್ರೆಯ ವೈದ್ಯರೊಂದಿಗೆ ಸೇರಿ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಆರೋಗ್ಯ ಯೋಧರಾಗಿ ಕಾರ್ಯ ನಿರ್ವಹಿಸಿದರು ಬಿಪಿ,ಶುಗರ್,ಇಸಿಜಿ ಹಾಗೂ ರೋಗಿಗಳ ನೊಂದಣಿ ಮತ್ತು ಔಷಧ ವಿತರಣೆಯಲ್ಲಿ ಕೆಲಸ ಮಾಡಿ ಸಾರ್ವಜನಿಕರ ಪ್ರಶಂಸೆಯನ್ನು ಗಿಟ್ಟಿಸಿಕೊಂಡರು,ಇದೇ ಸಂದರ್ಭದಲ್ಲಿ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್‌ನ ಪ್ರಾಚಾರ್ಯರಾದ ಲಾಜರ್ ಸಿರಿಲ್ ಸಹ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುತ್ತಾ ತಮ್ಮ ಅಳಿಲು ಸೇವೆಯನ್ನು ಸಾರ್ವಜನಿಕರಿಗೆ ನೀಡಿದರು ಒಟ್ಟಾರೆ ಆರೋಗ್ಯ





# ರಾಜ್ಯಕ್ಕೆ ಮಾದರಿಯಾದ ಕೊಪ್ಪಳ ಜಿಲ್ಲೆಯ ಯೋಜನೆ

■ ನೈಜ್ಯ ದೆಸೆ ನ್ಯೂಸ್

ಕೊಪ್ಪಳ: ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಅಗತ್ಯವೆನ್ನುವ ಕಾರಣಕ್ಕೆ ಮಕ್ಕಳಿಗೆ ನೀರು ಕುಡಿಯುವಂತೆ ಜ್ಞಾಪಿಸಲು ಶಾಲೆಗಳಲ್ಲಿ 'ನೀರಿನ ಗಂಟೆ' (ವಾಟರ್ ಬೆಲ್) ಬಾರಿಸುವುದನ್ನು ಕಡ್ಡಾಯಗೊಳಿಸಿ ಶಾಲಾ ಶಿಕ್ಷಣ ಇಲಾಖೆಯ 'ಪಿ.ಎಂ ಪೋಷಣ್ ಶಕ್ತಿ ನಿರ್ಮಾಣ್' ನಿರ್ದೇಶಕರು ಸುತ್ತೋಲೆ ಹೊರಡಿಸಿದ್ದು, ಕೊಪ್ಪಳ ಜಿಲ್ಲೆಯಲ್ಲಿ ಮೂರೂವರೆ ವರ್ಷಗಳ ಹಿಂದಿನಿಂದಲೇ ಚಾಲ್ತಿಯಲ್ಲಿರುವ ಯೋಜನೆ ಈಗ ರಾಜ್ಯದ ಎಲ್ಲ ಶಾಲೆಗಳಿಗೂ ವಿಸ್ತರಣೆಯಾಗಿದೆ.ಆರೋಗ್ಯ ಹಾಗೂ ಬೆಳವಣಿಗೆ ದೃಷ್ಟಿಯಿಂದ ಮಕ್ಕಳು ನಿತ್ಯವೂ ನಿಗದಿತ ಪ್ರಮಾಣದಲ್ಲಿ ನೀರು ಕುಡಿಯಬೇಕು. ಆದರೆ, ಮಕ್ಕಳಿಗೆ ಈ ಕುರಿತು ಸೂಕ್ತ ಅರಿವು ಇರುವುದಿಲ್ಲ. ಅದಕ್ಕಾಗಿ ಶಾಲಾ ಅವಧಿಯಲ್ಲಿ ಮಕ್ಕಳು ನಿಯಮಿತವಾಗಿ ನೀರು ಕುಡಿಯುವುದನ್ನು ನೆನಪಿಸಬೇಕಾದುದು ಶಿಕ್ಷಕರು ಮತ್ತು ಸಿಬ್ಬಂದಿಯ ಜವಾಬ್ದಾರಿಯೂ ಆಗಿದೆ ಎನ್ನುವ ಕಾರಣಕ್ಕೆ ಸರ್ಕಾರ ಈ ಸುತ್ತೋಲೆ ಹೊರಡಿಸಿದೆ. ಇದರ ಬಗ್ಗೆ ಹಿಂದೆಯೂ ಅನೇಕ ಬಾರಿ ಚರ್ಚೆಯಾಗಿ-ತ್ತು.ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಚಿಕ್ಕಬೆಣಕಲ್ ಗ್ರಾಮದಲ್ಲಿರುವ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವಾಲ್ಮೀಕಿ ಆಶ್ರಮ ಶಾಲೆಯಲ್ಲಿ ಪ್ರತಿ ಗಂಟೆಗೆ 'ವಾಟರ್ ಬೆಲ್' ಪರಿಕಲ್ಪನೆ ಜಾರಿಯಾಗಿಯೇ ಮೂರೂವರೆ ವರ್ಷಗಳಾಗಿವೆ. ಈ ಶಾಲೆಯಲ್ಲಿ ಒಂದರಿಂದ ಐದನೇ ತರಗತಿವರೆಗೆ ಓದುವ ಮಕ್ಕಳಿಗೆ ವಾಟರ್ ಬಾಟಲ್‌ಗಳನ್ನು ನೀಡಲಾಗಿದ್ದು, ಸರಿಯಾಗಿ ತಾಸಿಗೆ ಒಂದು ಸಲ ಬೆಲ್ ಬಾರಿಸಲಾಗುತ್ತದೆ. ಆಗ ಮಕ್ಕಳು ಕೆಲವು ನಿಮಿಷ ನೀರು ಕುಡಿಯುತ್ತಾರೆ.ಆ ಶಾಲೆಯಲ್ಲಿ ಮಕ್ಕಳು ಬೆಳಿಗ್ಗೆ ತರಗತಿಗೆ ಬರುವಷ್ಟರಲ್ಲಿ ಸಿಬ್ಬಂದಿಯೇ ಅರ್ಧ ಲೀಟರ್ ಬಾಟಲಿಯಲ್ಲಿ ನೀರು ತುಂಬಿಡುತ್ತಾರೆ. ಬೆಳಿಗ್ಗೆ 11 ಹಾಗೂ 12 ಗಂಟೆಗೊಮ್ಮೆ 'ವಾಟರ್ ಬೆಲ್' ಬಾರಿಸಲಾಗುತ್ತದೆ. ಮಧ್ಯಾಹ್ನ 1.30ಕ್ಕೆ ಊಟದ ಸಮಯ. ಮಧ್ಯಾಹ್ನದ ಅವಧಿಯಲ್ಲಿ ಮೂರು ಹಾಗೂ ನಾಲ್ಕು ಗಂಟೆಗೆ ಬೆಲ್ ಬಾರಿಸಿ ನೀರು ಕುಡಿಯಲು ನೆನಪಿಸಲಾಗುತ್ತದೆ. ಜಿಲ್ಲೆಯ ಮಾದರಿ ಅನುಕರಿಸಿದ ರಾಜ್ಯದ ಅಂದಾಜು 120 ಆಶ್ರಮ ಶಾಲೆಗಳಲ್ಲಿ 'ವಾಟ-ರ್ ಬೆಲ್' ಯೋಜನೆ ಅನುಷ್ಠಾನ ಮಾಡಬೇಕು ಎಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಆಗಲೇ ಆದೇಶಿಸಿತ್ತು. ಈಗ ಎಲ್ಲ ಶಾಲೆಗಳಿಗೂ ಆದೇಶ ಅನ್ವಯವಾಗಲಿದೆ.ಪ್ರಾಯೋಗಿಕ ಯೋಜನೆ ಬಗ್ಗೆ ಆರಂಭಿಕ ದಿನಗಳಲ್ಲಿ ಅಲ್ಲಿನ ಸಿಬ್ಬಂದಿ ವಿದ್ಯಾರ್ಥಿಗಳಿಗೆ ನೆನಪಿಸಿ ನೀರು ಕುಡಿಯಲು ಪ್ರೇರೇಪಿಸಬೇಕಿತ್ತು. ಈಗ ಮಕ್ಕಳೇ ಸ್ವಯಂಪ್ರೇರಿತರಾಗಿ ಒಂದು ಗಂಟೆಗೊಮ್ಮೆ ನೀರು ಕುಡಿಯುತ್ತಿದ್ದಾರೆ. ಜಿಲ್ಲೆಯಲ್ಲಿ ಆರಂಭವಾದ ಯೋಜನೆಯನ್ನು ಈಗ ರಾಜ್ಯದಾದ್ಯಂತ ಶಾಲೆಗಳಲ್ಲಿ ಅನುಷ್ಠಾನಕ್ಕೆ ತರುವಂತೆ ಸರ್ಕಾರವೇ ಆದೇಶ ಹೊರಡಿಸಿದ್ದು, ಜಿಲ್ಲೆಯ ಅಧಿಕಾ-ರಿಗಳ ಖುಷಿಗೆ ಕಾರಣವಾಗಿದೆ.-ಅಜ್ಜಪ್ಪ ಸೊಗಲದ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಮೂರೂವರೆ ವರ್ಷಗಳ ಹಿಂದೆಯೇ ಕೊಪ್ಪಳ ಜಿಲ್ಲೆಯಲ್ಲಿ ಅನುಷ್ಠಾನಕ್ಕೆ ಬಂದ ವಾಟರ್‌ಬೆಲ್ ಪರಿಕಲ್ಪನೆಯನ್ನು ಶಾಲಾ ಶಿಕ್ಷಣ ಇಲಾಖೆಯ ಈಗ ರಾಜ್ಯದಾದ್ಯಂತ ವಿಸ್ತರಿಸಿದ್ದು ಖುಷಿ ನೀಡಿದೆ. -ಗ್ಯಾನನಗೌಡ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಗಂಗಾವತಿ ತಾಲ್ಲೂಕು ಅಧಿಕಾರಿ ಪ್ರಜಾವಾಣಿಯ ಸಂಗತ ಅಂಕಣದಲ್ಲಿ ವಾಟರ್ ಬೆಲ್ ಕುರಿತು ಪ್ರಕಟವಾಗಿದ್ದ ಲೇಖನ ಪ್ರೇರಣೆಯಾಗಿಟ್ಟುಕೊಂಡು ಮಕ್ಕಳಿಗೆ ಇದನ್ನು ಜಾರಿ ಮಾಡಲಾಗಿತ್ತು. ಮಕ್ಕಳಿಗೆ ಬಹಳಷ್ಟು ಅನುಕೂಲವಾಗಿದೆ.



## ಶಿಕ್ಷಣ ಮಾರ್ಗದರ್ಶಿ ವಿಶೇಷ

### Physiotherapy (BPT)

Physiotherapy (BPT) ಎಂದರೆ ಭೌತಚಿಕಿತ್ಸೆಯಲ್ಲಿ ಪದವಿ, ಇದು ಗಾಯ ಅಥವಾ ಅಂಗವೈಕಲ್ಯದಿಂದ ಚೇತರಿಸಿಕೊಳ್ಳಲು ವ್ಯಾಯಾಮ ಮತ್ತು ಚಿಕಿತ್ಸೆಯ ಮೂಲಕ ಚಲನಶೀಲತೆಯನ್ನು ಪುನಃಸ್ಥಾಪಿಸುವ ಕೋರ್ಸ್ ಬ್ಯಾಚುಲರ್ ಆಫ್ ಫಿಸಿಯೋಥೆರಪಿ (BPT) ಒಂದು ಸಮಗ್ರ ಪದವಿಪೂರ್ವ ಕಾರ್ಯಕ್ರಮವಾಗಿದ್ದು, ವಿದ್ಯಾರ್ಥಿಗಳು ಪ್ರವೀಣ ಭೌತಚಿಕಿತ್ಸೆಯ ವೈದ್ಯರಾಗಲು ಅಗತ್ಯವಾದ ಕೌಶಲ್ಯ ಮತ್ತು ಜ್ಞಾನವನ್ನು ಹೊಂದಲು ಸಜ್ಜುಗೊಳಿಸಲು ವಿನ್ಯಾಸಗೊಳಿಸಲಾಗಿದೆ. ಬ್ಯಾಚುಲರ್ ಆಫ್ ಫಿಸಿಯೋಥೆರಪಿಯ ಸಂಕ್ಷಿಪ್ತ ರೂಪವಾದ ಃಕಖ, ಮಾನವ ಅಂಗರಚನಾಶಾಸ್ತ್ರ, ಬಯೋಮೆಕಾನಿಕ್ಸ್ ಮತ್ತು ಭೌತಚಿಕಿತ್ಸೆಯ ತತ್ವಗಳ ಜಟಿಲತೆಗಳನ್ನು ಪರಿಶೀಲಿಸುವ 6 ತಿಂಗಳ ಇಂಟರ್ನ್‌ಶಿಪ್ ಹೊಂದಿರುವ ನಾಲ್ಕೂವರೆ ಪದವಿ ಕಾರ್ಯಕ್ರಮವಾಗಿದೆ.; ಇದಕ್ಕೆ ಪಿಯುಸಿ ವಿಜ್ಞಾನ (PCB/M) ಅರ್ಹತೆ ಬೇಕು, ಇದು 4 ವರ್ಷಗಳ ಪದವಿ (ಇಂಟರ್ನ್‌ಶಿಪ್ ಸೇರಿದಂತೆ) ಆಗಿದ್ದು, ಅಂಗರಚನಾಶಾಸ್ತ್ರ, ಶರೀರಶಾಸ್ತ್ರ, ಬಯೋಮೆಕಾನಿಕ್ಸ್ ಮುಖ್ಯ ವಿಷಯಗಳಾಗಿವೆ ಮತ್ತು ಭವಿಷ್ಯದಲ್ಲಿ ಉತ್ತಮ ಉದ್ಯೋಗಾವಕಾಶಗಳನ್ನು ನೀಡುತ್ತದೆ. ಃಕಖ : Bachelor of Physiotherapy (BPT).ಅವಧಿ: 4 ವರ್ಷಗಳ ಪದವಿ + 6 ತಿಂಗಳ ಕಡ್ಡಾಯ ಇಂಟರ್ನ್‌ಶಿಪ್.ಅರ್ಹತೆ: ಪಿಯುಸಿ (12ನೇ ತರಗತಿ) ವಿಜ್ಞಾನ ವಿಭಾಗದಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ (PCB/M) ವಿಷಯಗಳೊಂದಿಗೆ ಉತ್ತೀರ್ಣರಾಗಿರಬೇಕು. ಕೋರ್ಸ್‌ನ ಉದ್ದೇಶ: ದೈಹಿಕ ಚಲನವಲನಗಳನ್ನು ಸುಧಾರಿಸುವುದು, ನೋವು ನಿವಾರಿಸುವುದು ಮತ್ತು ಪುನರ್ವಸತಿ ನೀಡುವುದು. ಅಧ್ಯಯನ ವಿಷಯಗಳು (ಪಠ್ಯಕ್ರಮ):ಅಂಗರಚನಾಶಾಸ್ತ್ರ (Anatomy)ಶರೀರಶಾಸ್ತ್ರ (Physiology)ಬಯೋಕೆಮಿಸ್ಟ್ರಿ (Biochemistry)ಬಯೋಮೆಕಾನಿಕ್ಸ್ (Biomechanics)ವ್ಯಾಯಾಮ ಚಿಕಿತ್ಸೆ (Exercise Therapy)ಎಲೆಕ್ಟ್ರೋಥೆರಪಿ (Electrotherapy)ಹಸ್ತಚಾಲಿತ ತಂತ್ರಗಳು (Manual Therapy) ಪ್ರವೇಶ ಪ್ರಕ್ರಿಯೆ:ಸಾಮಾನ್ಯವಾಗಿ 12ನೇ ತರಗತಿಯ ಅಂಕಗಳ ಮೇಲೆ ಆಧರಿಸಿರುತ್ತದೆ.ಕೆಲವು ವಿಶ್ವವಿದ್ಯಾಲಯಗಳು ಅಗಇಖ, ಏಅಇಖ, ಓಇಇಖ ಮುಂತಾದ ಪ್ರವೇಶ ಪರೀಕ್ಷೆಗಳ ಅಂಕಗಳನ್ನೂ ಪರಿಗಣಿಸುತ್ತವೆ. ವೃತ್ತಿ ಅವಕಾಶಗಳು:ಫಿಸಿಯೋಥೆರಪಿಸ್ಟ್, ಚಲನಶೀಲತೆ ತಜ್ಞರು.ಆಸ್ಪತ್ರೆಗಳು, ಕ್ಲಿನಿಕ್‌ಗಳು, ಕ್ರೀಡಾ ತಂಡಗಳು ಮತ್ತು ಪುನರ್ವಸತಿ ಕೇಂದ್ರಗಳಲ್ಲಿ ಕೆಲಸ.

## ಆಡಳಿತಾತ್ಮಕ ತರಬೇತಿ ಕಾರ್ಯಾಗಾರ

**ನೈಜ್ಯ ದೆಸೆ ನ್ಯೂಸ್**

ಆಡಳಿತಾತ್ಮಕ ತರಬೇತಿ ಕಾರ್ಯಾಗಾರಗಳು ಕೇವಲ ನಿಯಮಗಳ ಕಲಿಕೆಯಲ್ಲ, ಅವು ಸ್ಥಿರವಾದ ಆಡಳಿತ ನೀಡಲು ಮತ್ತು ಶಿಕ್ಷಣ ವ್ಯವಸ್ಥೆಯ ವಿವಿಧ ಸ್ತರಗಳ ನಡುವೆ ಉತ್ತಮ ಬಾಂಧವ್ಯ ವೃದ್ಧಿಸಲು ಸಹಕಾರಿಯಾಗುತ್ತವೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಜಿ.ಎಚ್.ಜಗದೀಶ ಅವರು ತಿಳಿಸಿದರು.ಜಿಲ್ಲೆಯ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗಾಗಿ ಆಯೋಜಿಸಿದ ಒಂದು ದಿನದ ಆಡಳಿತಾತ್ಮಕ ತರಬೇತಿ ಕಾರ್ಯಾಗಾರವನ್ನು ಶನಿವಾರ ಉದ್ಘಾಟಿಸಿ ಮಾತನಾಡುತ್ತಿದ್ದರು.ಉಪನ್ಯಾಸಕರ ಪರಿಶ್ರಮಕ್ಕೆ ಸೂಕ್ತ ಮಾರ್ಗದರ್ಶನ ನೀಡಿ, ಸಿಬ್ಬಂದಿ ಮತ್ತು ವಿದ್ಯಾರ್ಥಿಗಳನ್ನು ಸಮನ್ವಯತೆಯಿಂದ ಮುನ್ನಡೆಸುವ ಗುರುತರ ಜವಾಬ್ದಾರಿ ಪ್ರಾಚಾರ್ಯರ ಮೇಲಿದೆ. ಪೋಷಕರು ಮತ್ತು ಸಾರ್ವಜನಿಕರೊಂದಿಗೆ ಉತ್ತಮ ಸಂಬಂಧ ಹೊಂದಿದಾಗ ಮಾತ್ರ ಶೈಕ್ಷಣಿಕ ಗುರಿ ತಲುಪಲು ಸಾಧ್ಯ ಎಂದರು.ಪ್ರಾಚಾರ್ಯರ ಸಂಘದ ಜಿಲ್ಲಾಧ್ಯಕ್ಷ ಬಸಪ್ಪ ನಾಗೋಲಿ ಮಾತನಾಡಿ, ಸಕಲ ಸಿಬ್ಬಂದಿಯ ವಿಶ್ವಾಸ ಗಳಿಸಿ ಕೆಲಸ ಮಾಡಿದರೆ ಇಲಾಖೆ ನಿರೀಕ್ಷಿಸುವಲ್ಲಿ ಉತ್ತಮ ಫಲಿತಾಂಶ ಲಭ್ಯವಾಗುತ್ತದೆ ಎಂದು ಹೇಳಿದರು.ರಾಜ್ಯ ಮಟ್ಟದ ಜಾನಪದ ಗಾಯನ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಕುಮಾರಿ ಕವಿತಾ ಶಿವಪ್ಪ ಕಾಶಿಯಾರ, ರಾಜ್ಯ ಮಟ್ಟದ ಜಂಪ್ರೋಫ್ ಕ್ರೀಡಾಕೂಟದ ಯಶಸ್ವಿ ಆಯೋಜನೆ ಭೀಮಪ್ಪ ಗೊಲ್ಲರ್, ನಿವೃತ್ತ ಪ್ರಾಚಾರ್ಯ ಅನಿಲಕುಮಾರ, ಉತ್ತಮ ಸೇವೆಗಾಗಿ ಎಸ್.ವ್ಹಿ. ಮೇಳಿ ಅವರನ್ನು ಸನ್ಮಾನಿಸಲಾಯಿತು.ಹಿರಿಯ ಪ್ರಾಚಾರ್ಯರಾದ ಅನಿಲಕುಮಾರ ಜಿ, ರಾಜಶೇಖರ ಪಾಟೀಲ್, ಶಿವಾನಂದ ಎ.ಆರ್, ಸಂಘದ ಕಾರ್ಯದರ್ಶಿ ಬಸವರಾಜ, ಕೋಶಾಧ್ಯಕ್ಷ ಶಾಂತಪ್ಪ ಟಿ.ಸಿ ಹಾಗೂ ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರಗೌಡ ಸೇರಿದಂತೆ ಜಿಲ್ಲೆಯ ವಿವಿಧ ಕಾಲೇಜುಗಳ 100ಕ್ಕೂ ಹೆಚ್ಚು ಪ್ರಾಚಾರ್ಯರು ಈ ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು



# ಶಿಕ್ಷಣದ ಪ್ರಾಮುಖ್ಯತೆ ಪ್ರತಿಯೊಬ್ಬರೂ ಅರಿತುಕೊಳ್ಳುವುದು ಅಗತ್ಯ – ಯಾಳಗಿ



**ನೈಜ್ಯ ದೆಸೆ ನ್ಯೂಸ್**

ಮಾನ್ವಿ – ಶಿಕ್ಷಣದ ಪ್ರಾಮುಖ್ಯತೆಯನ್ನು ಒತ್ತಿ ಹೇಳುವ ದುರ್ಗತಿ ಯಾವ ದೇಶಕ್ಕೂ ಬರಬಾರದು. ಪ್ರತಿಯೊಬ್ಬರೂ ಶಿಕ್ಷಣದ ಮಹತ್ವ ಅರಿತು ಸಮಾಜಕ್ಕೆ ತಕ್ಕ ನ್ಯಾಯ ಒದಗಿಸಬೇಕು ಎಂದು ಸಾಹಿತಿ ರಮೇಶಬಾಬು ಯಾಳಗಿ ಅವರು ಹೇಳಿದರು. ಅವರು ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ ಸರಕಾರಿ ಮೆಟ್ರಿಕ್ ನಂತರ (ಪಿಯುಸಿ) ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿನಿಯರಿಗೆ ಆಯೋಜಿಸಿದ್ದ ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಶೈಕ್ಷಣಿಕವಾಗಿ ನಾವು ಪ್ರಗತಿ ಸಾಧಿಸದಿದ್ದರೆ ಸಾಮಾಜಿಕವಾಗಿ, ಆರ್ಥಿಕವಾಗಿ ಪ್ರಗತಿ ಹೊಂದಲು ಸಾಧ್ಯವಿಲ್ಲ. ಅದ್ದರಿಂದ ವಿದ್ಯಾರ್ಥಿಗಳೆಲ್ಲರೂ ಸತತ ಅಭ್ಯಾಸದಲ್ಲಿ ತೊಡಗಿ ಉತ್ತಮ ಫಲಿತಾಂಶ ಪಡೆಯಬೇಕು. ನಿಮ್ಮ ಭವಿಷ್ಯ ನಿಮ್ಮ ಕೈಯಲ್ಲಿಯೇ ಇರುತ್ತದೆ. ಪರೀಕ್ಷೆಗೆ ದಿನಗಳು ಹತ್ತಿರ ಬರುತ್ತಿವೆ. ಸಮಯಪ್ರಜ್ಞೆ ಬೆಳೆಸಿಕೊಂಡು, ಅಚಲ ಶ್ರದ್ಧೆಯಿಂದ, ಬಿಡದ ಛಲದಿಂದ, ಆತ್ಮವಿಶ್ವಾಸದಿಂದ ಜೀವನದಲ್ಲಿ ಏನಾದರೂ ಸಾಧಿಸಿ ಹೆತ್ತವರಿಗೆ, ಶಿಕ್ಷಕರಿಗೆ ಗೌರವ ತರಬೇಕು ಎಂದು ವಿದ್ಯಾರ್ಥಿನಿಯರಿಗೆ ಯಾಳಗಿ ಅವರು ಕರೆ ನೀಡಿದರು. ನಿಲಯ ಪಾಲಕರಾದಮಂಜುಳಾ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಅಡುಗೆಯವರಾದ ದೀಪಾ, ವಿಜಯಶಾಂತಿ, ಶಾರದಾ, ಆಶಾ, ರೇಣುಕಾ, ಅಂಬಮ್ಮ, ಈರಮ್ಮ, ಸರೋಜಮ್ಮ, ನೂರ್ ಜಾಹನ್, ಹುಚ್ಚಣ್ಣ ಉಪಸ್ಥಿತರಿದ್ದರು.ಕಾರ್ಯಕ್ರಮದ ನಂತರ ವಿದ್ಯಾರ್ಥಿನಿಯರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ಇ–ಆಫೀಸ್ ಬಳಕೆಯಲ್ಲಿ ಕಲಬುರಗಿ ನಂಬರ್

**ನೈಜ್ಯ ದೆಸೆ ನ್ಯೂಸ್**

ಕರ್ನಾಟಕ : ಸರ್ಕಾರಿ ಕಚೇರಿಯಲ್ಲಿ ಕಡತಗಳ ತ್ವರಿತ ವಿಲೇವಾರಿಗೆ ತಂತ್ರಜ್ಞಾನದ ಸಮರ್ಪಕ ಬಳಕೆಗೆ ಒತ್ತು ನೀಡಿದ ಪರಿಣಾಮ ಇ–ಆಫೀಸ್ ಬಳಕೆಯಲ್ಲಿ ಕಲಬುರಗಿ ಜಿಲ್ಲಾ ಪಂಚಾಯತಿ ಇಡೀ ರಾಜ್ಯದಲ್ಲಿಯೇ ನಂಬರ್–1 ಸ್ಥಾನ ಪಡೆದುಕೊಂಡಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.ಕಳೆದ 2025ನೇ ಕ್ಯಾಲೆಂಡರ್ ವರ್ಷದಲ್ಲಿ ಜಿಲ್ಲೆಯಲ್ಲಿ 2,938 ಇ–ಕಡತ ಸೃಷ್ಟಿಸಿ 54,381 ಕಡತ ವಿಲೇವಾರಿ ಮಾಡಲಾಗಿದೆ. ಸಾರ್ವಜನಿಕರಿಂದ ಸ್ವೀಕೃತವಾದ 13,664 ಪತ್ರಗಳನ್ನು ಇ–ರಸೀದಿಯಡಿ ಸೃಷ್ಟಿಸಿ 3,52,221 ಇ–ರಸೀದಿ ವಿಲೇವಾರಿ ಮಾಡಲಾಗಿದೆ.ಟಾಪ್ 10ನಲ್ಲಿ ಕಲ್ಯಾಣದ ನಾಲ್ಕು ಜಿಲ್ಲೆ:ರಾಜ್ಯದಾದ್ಯಂತ ಕಳೆದ ವರ್ಷ ಜಿಲ್ಲಾ ಪಂಚಾಯಿತಿ ಕಚೇರಿಯಲ್ಲಿ ಇ–ಕಡತ ಬಳಕೆಯಲ್ಲಿ ಟಾಪ್–10 ಜಿಲ್ಲೆಗಳ ಅಂಕಿ ಸಂಖ್ಯೆ ಅವಲೋಕಿಸಿದರೆ 2,938 ಇ–ಕಡತ ಸೃಜಿಸಿ ಕಲಬುರಗಿ ಜಿಲ್ಲಾ ಪಂಚಾಯತ್ ಮೊದಲನೇ ಸ್ಥಾನದಲ್ಲಿದ್ದರೆ, 2,523 ಕಡತ ಸೃಜಿಸಿ ಚಿತ್ರದುರ್ಗ ಜಿ.ಪಂ. ಎರಡನೇ ಹಾಗೂ 2,476 ಕಡತದೊಂದಿಗೆ ಬೆಂಗಳೂರು ನಗರ ಜಿ.ಪಂ. ಜಿಲ್ಲೆ ಮೂರನೇ ಸ್ಥಾನ ಪಡೆದಿದೆ. 2,339 ಇ–ಕಡತ ಸೃಜಿಸಿ ಐದನೇ ಸ್ಥಾನದಲ್ಲಿ ಬೀದರ್, 1,955 ಇ–ಕಡತ ಸೃಜಿಸಿ ಎಂಟನೇ ಸ್ಥಾನದಲ್ಲಿ ಯಾದಗಿರಿ, 1,924 ಇ–ಕಡತ ಸೃಜನೆಯೊಂದಿಗೆ ಒಂಬತ್ತನೇ ಸ್ಥಾನದಲ್ಲಿ ಕೊಪ್ಪಳ ಜಿಲ್ಲಾ ಪಂಚಾಯಿತಿ ಸ್ಥಾನ ಪಡೆದುಕೊಂಡಿದೆ. ಅಗ್ರ 10ರಲ್ಲಿ ಕಲ್ಯಾಣ ಕರ್ನಾಟಕ 4 ಜಿಲ್ಲೆಗಳು ಇ–ಆಫೀಸ್ ಅನುಷ್ಠಾನದಲ್ಲಿ ಸ್ಥಾನ ಪಡೆದಿರುವುದು ಪ್ರದೇಶದ ಗ್ರಾಮೀಣ ಭಾಗದಲ್ಲಿ ಆಡಳಿತ ವೇಗ ಪಡೆದುಕೊಂಡಿರುವುದಕ್ಕೆ ಹಿಡಿದ ಕನ್ನಡಿಯಾಗಿದೆ. ಸುಗಮ ಆಡಳಿತಕ್ಕೆ ಕಲಬುರಗಿ ಜಿಲ್ಲೆ ಮಾದರಿಯಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.ಆಳಂದ ತಾಲ್ಲೂಕು ಪಂಚಾಯಿತಿ 1,127 ಇ–ಕಡತ ಸೃಜಿಸಿ 3,560 ಕಡತ ವಿಲೇವಾರಿ ಮತ್ತು 526 ಇ–ರಸೀದಿ ಸೃಷ್ಟಿಸಿ 2,022 ಇ–ರಸೀದಿ ವಿಲೇವಾರಿಯೊಂದಿಗೆ ರಾಜ್ಯದಲ್ಲಿಯೇ ದ್ವಿತೀಯ ಸ್ಥಾನ ಪಡೆದುಕೊಂಡಿದೆ. ಅಫಜಲಪುರ ತಾಲ್ಲೂಕು ಪಂಚಾಯಿತಿ 668 ಇ–ಕಡತ ಸೃಜಿಸಿ 3,189 ಕಡತ ವಿಲೇವಾರಿ ಮಾಡಿ ಏಳನೇ ಸ್ಥಾನ ಹಾಗೂ ಕಲಬುರಗಿ ತಾ.ಪಂ. 564 ಇ–ಕಡತ ಸೃಜಿಸಿ 1,527 ಕಡತ ವಿಲೇವಾರಿ ಮಾಡಿ ಒಂಬತ್ತನೇ ಸ್ಥಾನ ಕಾಯ್ದುಕೊಂಡಿದೆ. ಈ ಮೂಲಕ ತಾಲ್ಲೂಕುವಾರು ಟಾಪ್ ಟೆನ್‌ನಲ್ಲಿ ಜಿಲ್ಲೆಯ ಮೂರು ತಾಲ್ಲೂಕುಗಳು ಸ್ಥಾನ ಪಡೆದಿವೆ.ಪ್ರಿಯಾಂಕ್ ಖರ್ಗೆಪ್ರಿಯಾಂಕ್ ಖರ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಸಾರ್ವಜನಿಕರು ಸರ್ಕಾರಿ ಕಚೇರಿಗಳಿಗೆ ಅನಗತ್ಯ ವರ್ಷಗಟ್ಟಲೇ ಅಲೆದಾಡುವುದನ್ನು ತಪ್ಪಿಸಲೆಂದೆ ಇ–ಆಫೀಸ್ ಅನುಷ್ಠಾನದ ಮೂಲಕ ಪ್ರತಿ ಅಧಿಕಾರಿ–ಸಿಬ್ಬಂದಿಗೆ ಕಾಲಮಿತಿಲ್ಲಿಯೆ ಕಡತ ವಿಲೇವಾರಿಗೆ ಹೊಣೆಗಾರಿಕೆ ನೀಡಿದ ಫಲ ಇದಾಗಿದೆ




# ಉತ್ತಮ ಶಿಕ್ಷಕರಾಗಿ ದೇಶಕ್ಕೆ ಸಂಸ್ಕಾರ, ಸನ್ನಡತೆಯ ಮಾನವ ಸಂಪನ್ಮೂಲ ಕೊಡುಗೆಯಾಗಿ ನೀಡಿ – ಶಾಸಕಿ ಕರೆಮ್ಮ ಜಿ.ನಾಯಕ




**ನೈಜ್ಯ ದೆಸೆ ನ್ಯೂಸ್**

ದೇವದುರ್ಗ : 'ಒಬ್ಬ ಶಿಕ್ಷಕ ಮನಸ್ಸು ಮಾಡಿದರೆ ಜಗತ್ತು ಬದಲಾವಣೆ ಮಾಡಬಹುದು. ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದದ್ದು. ಉತ್ತಮ ಶಿಕ್ಷಕರಾಗಿ ದೇಶಕ್ಕೆ ಸಂಸ್ಕಾರ, ಸನ್ನಡತೆಯ ಮಾನವ ಸಂಪನ್ಮೂಲ ಕೊಡುಗೆಯಾಗಿ ನೀಡಿ' ಎಂದು ಶಾಸಕಿ ಕರೆಮ್ಮ ಜಿ.ನಾಯಕ ಹೇಳಿದರು.ತಾಲ್ಲೂಕಿನ ಹೂವಿನಹೆಡಗಿಯ ಗಡ್ಡೆಗೂಳಿ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಶಾಲಾ ಶಿಕ್ಷಣ ಇಲಾಖೆ ಶನಿವಾರ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಮತ್ತು ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.'ದೇಶಕ್ಕೆ ಉತ್ತಮ ನಾಗರಿಕರನ್ನು ರೂಪಿಸಿಕೊಡುವಲ್ಲಿ ಗುರುವಿನ ಪಾತ್ರ ಮಹತ್ವದ್ದಾಗಿದೆ. ನಮ್ಮಲ್ಲಿರುವ ಅಜ್ಞಾನ ಹೊರಗೆ ಹಾಕಲು ಶಿಕ್ಷಕರು ಮಾರ್ಗದರ್ಶಿಯಾಗುತ್ತಾರೆ. ಎಲ್ಲಾ ವೃತ್ತಿಗೆ ಮೂಲ ಶಿಕ್ಷಣ ವೃತ್ತಿ' ಎಂದರು. ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಚಂದ್ರಶೇಖರ ನುಗ್ಗಿ ಮಾತನಾಡಿ,'ಇತ್ತೀಚೆಗೆ ಸರ್ಕಾರ ಶಿಕ್ಷಕರಿಗೆ ಹೆಚ್ಚು ಬೋಧಕೇತರ ಕಾರ್ಯಚಟುವಟಿಕೆ ನೀಡುತ್ತಿದ್ದು, ಮಕ್ಕಳಿಗೆ ಉತ್ತಮ ಪಾಠ ಮಾಡಲಾಗುತ್ತಿಲ್ಲ. ಶಿಕ್ಷಕರ ಮೇಲಿನ ಜವಾಬ್ದಾರಿ ಕಡಿಮೆ ಮಾಡುವಂತೆ ಸದನದಲ್ಲಿ ಧ್ವನಿ ಎತ್ತಿ' ಎಂದು ಶಾಸಕಿಗೆ ಮನವಿ ಮಾಡಿದರು.ಪ್ರಾಥಮಿಕ ಶಾಲಾ ವಿಭಾಗದಿಂದ 51 ಶಿಕ್ಷಕರು, ಪ್ರೌಢಶಾಲಾ ವಿಭಾಗದಿಂದ 11 ಮತ್ತು ಅತಿಥಿ ಶಿಕ್ಷಕರ ವಿಭಾಗದಿಂದ 29 ಶಿಕ್ಷಕರಿಗೆ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಯಿತು. ನಿವೃತ್ತಿ ಹೊಂದಿದ 25 ಶಿಕ್ಷಕರಿಗೆ ಸನ್ಮಾನಿಸಲಾಯಿತು.ವಿಧಾನ ಪರಿಷತ್ ಸದಸ್ಯ ಚಂದ್ರಶೇಖರ ಪಾಟೀಲ, ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ, ಜಿಲ್ಲಾ ಉಪನಿರ್ದೇಶಕ ಕೆ.ಡಿ.ಬಡಿಗೇರ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಲಕ್ಷ್ಮಣ ಜ್ಯೋತಿ, ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಮಲ್ಲಿಕಾರ್ಜುನ, ಪುರಸಭೆ ಮುಖ್ಯಾಧಿಕಾರಿ ಹಂಪಯ್ಯ.ಕೆ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ (ಗ್ರೇಡ್–2) ರಾಜಕುಮಾರ, ಸರ್ಕಾರಿ ನೌಕರರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಹನುಮಂತ್ರಾಯ ಶಾಖೆ, ಎಪಿಎಂಸಿ ಅಧ್ಯಕ್ಷ ಆದನಗೌಡ ಪಾಟೀಲ, ಟಿಎಪಿಸಿಎಂಎಸ್ ಅಧ್ಯಕ್ಷ ಶರಣಗೌಡ, ಪ್ರಾಥಮಿಕ, ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಪದಾಧಿಕಾರಿಗಳು, ಶಿಕ್ಷಕರು ಮತ್ತು ವಿವಿಧ ಇಲಾಖೆಗಳ ತಾಲ್ಲೂಕುಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಆಶಾ ಕಾರ್ಯಕರ್ತೆಯರ ಸಂಘದ ಜಿಲ್ಲಾ ಸಮಿತಿಯಿಂದ ಮನವಿ

**ನೈಜ್ಯ ದೆಸೆ ನ್ಯೂಸ್**

ಕೊಪ್ಪಳ: ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ಜಿಲ್ಲಾ ಸಮಿತಿಯಿಂದ ವಿವಿಧ ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಕೊಪ್ಪಳ ಜಿಲ್ಲಾಧಿಕಾರಿ ಭವನದಲ್ಲಿನ ಸಂಸದರ ಕಚೇರಿಯಲ್ಲಿ ಸಂಸದ ರಾಜಶೇಖರ್ ಹಿಟ್ನಾಳ್ ಅವರಿಗೆ ಮನವಿ ಸಲ್ಲಿಸಲಾಯಿತು.ಆಶಾ ಕಾರ್ಯಕರ್ತೆಯರು ಸಾರ್ವಜನಿಕ ಆರೋಗ್ಯ ವ್ಯವಸ್ಥೆಯ ತಳಮಟ್ಟದಲ್ಲಿ ಪ್ರಮುಖ ಸೇವೆ ಸಲ್ಲಿಸುತ್ತಿದ್ದು, ಸರ್ಕಾರದ ಅನೇಕ ಆರೋಗ್ಯ ಯೋಜನೆಗಳನ್ನು ನೆಲಮಟ್ಟದಲ್ಲಿ ಯಶಸ್ವಿಯಾಗಿ ಅನುಷ್ಠಾನಿಸುತ್ತಿದ್ದಾರೆ.ಅವರಿಗೆ ಸಮರ್ಪಕ ಗೌರವಧನ, ಸಾಮಾಜಿಕ ಭದ್ರತೆ ಹಾಗೂ ಮೂಲಭೂತ ಸೌಲಭ್ಯಗಳ ಕೊರತೆ ಇನ್ನೂ ಮುಂದುವರಿದಿದೆ ಎಂದು ಆಕ್ರೋಶಗೊಂಡರು. ಆಶಾ ಕಾರ್ಯಕರ್ತೆಯರಿಗೆ ಕನಿಷ್ಠ ಮಾಸಿಕ ಗೌರವಧನವನ್ನು ಹೆಚ್ಚಿಸಬೇಕು, ಬಾಕಿ ಉಳಿದಿರುವ ಗೌರವಧನ ಮತ್ತು ಪ್ರೋತ್ಸಾಹ ಧನವನ್ನು ತಕ್ಷಣ ಪಾವತಿಸಬೇಕು, ಕಾರ್ಯ ನಿರ್ವಹಣೆಗೆ ಅಗತ್ಯವಾದ ವೆಚ್ಚಗಳಿಗೆ ಪ್ರತ್ಯೇಕ ಭತ್ಯೆ ನೀಡಬೇಕು. ರೂ.5 ಲಕ್ಷ ಜೀವ ವಿಮಾ ಸೌಲಭ್ಯ ಕಲ್ಪಿಸಿ, ಅವರನ್ನು ಶಾಶ್ವತ ಆರೋಗ್ಯ ಕಾರ್ಯಕರ್ತೆಯರಾಗಿ ಪರಿಗಣಿಸಬೇಕೆಂದು ಒತ್ತಾಯಿಸಿದಲ್ಲದೆ ಕೇಂದ್ರ ಆರೋಗ್ಯ ಸಚಿವರಾದ ಜೆ.ಪಿ. ನಡ್ಡಾ ಅವರು ಕೇಂದ್ರ ಬಜೆಟ್ನಲ್ಲಿ ಘೋಷಿಸಿದ ಆಶಾ ಕಾರ್ಯಕರ್ತೆಯರಿಗೆ ರೂ. 2,500 ರಿಂದ 3,000 ವರೆಗೆ ಪ್ರೋತ್ಸಾಹ ಧನ ನೀಡುವ ನಿರ್ಧಾರವನ್ನು ಕೂಡಲೇ ಜಾರಿಗೊಳಿಸಬೇಕು. ಈ ಘೋಷಣೆ ಕಾಗದದಲ್ಲೇ ಉಳಿಯದೆ ಕೂಡಲೇ ಅನುಷ್ಠಾನವಾಗಬೇಕೆಂದು ಆಗ್ರಹಿಸಿದರು.ಜಿಲ್ಲಾ ಅಧ್ಯಕ್ಷ ಶರಣು ಗಡ್ಡಿ, ಜಿಲ್ಲಾ ಕಾರ್ಯದರ್ಶಿ ಕೌಶಲ್ಯ ದೊಡ್ಡಗೌಡರ್, ಶೋಭಾ ಹೂಗಾರ್, ಅನ್ನಪೂರ್ಣ, ಸುನೀತಾ, ಶಾರದಾ, ಶಬನಾ, ಲಾಲ್ಬಿಪ್ಪಮ್ಮ ಬಿ, ಸುಧಾ, ಶಿವಮ್ಮ, ಲಕ್ಷ್ಮ, ಲಲಿತಾ, ಶರಣಮ್ಮ ಸೇರಿದಂತೆ ನೂರಾರು ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.



# ಬಲ್ಡೋಟ ತೊಲಗಿಸಿ ಕೊಪ್ಪಳ ಉಳಿಸಿ ಸಹಿ ಜಾಗೃತಿ ಆಂದೋಲನ



**ನೈಜ್ಯ ದೆಸೆ ನ್ಯೂಸ್**

ಕೊಪ್ಪಳ : ನಗರಸಭೆ ವಾಣಿಜ್ಯ ಸಂಕೀರ್ಣ ಮುಂದೆ ಬಲ್ಡೋಟ ತೊಲಗಿಸಿ ಕೊಪ್ಪಳ ಉಳಿಸಿ ಸಹಿ ಜಾಗೃತಿ ಆಂದೋಲನ ಶನಿವಾರ ಆರಂಭವಾಯಿತು. ವಾಣಿಜ್ಯೋದ್ಯಮಿ ಬಸವರಾಜ ಬಳ್ಳೊಳ್ಳಿ ಅವರು ಪರಿಸರ ಜಾಗೃತಿ ಸಹಿ ಆಂದೋಲನಕ್ಕೆ ಚಾಲನೆ ನೀಡಿ ಮಾತನಾಡಿ 'ಕೊಪ್ಪಳ ಹಾಗೂ ಸುತ್ತಲಿನ ಹಳ್ಳಿಗಳಿಗೆ ಕಾರ್ಖಾನೆ ವಿಷಾನಿಲ, ಕಂದು ದೂಳು ಹರಡಿ ಶುದ್ಧವಾಗಿದ್ದ ಪರಿಸರ ಮಾಲಿನ್ಯವಾಗಿದೆ.ಈ ದೂಳು ನಮ್ಮ ಮೇಲೆ ಬಿದ್ದಿರುವುದನ್ನು ಮಾತ್ರ ನೋಡುತ್ತೇವೆ. ಆದರೆ ನಮ್ಮ ದೇಹದೊಳಗೆ ಎಷ್ಟು ಸೇರುತ್ತದೆ ಎನ್ನುವುದು ಯಾರಿಗೂ ಗೊತ್ತಿಲ್ಲ. ಗಂಭೀರ ರೋಗಗಳು ಕಾಡುವಾಗ ಎಚ್ಚರಾದರೆ ಏನು ಪ್ರಯೋಜನ. ಈಗ ಸರಿಯಾದ ಸಂದರ್ಭ ಬಂದಿದೆ. ಎಚ್ಚರಗೊಂಡು ಮಾಲಿನ್ಯದ ವಿಷಕಾರುವ ಕಾರ್ಖಾನೆಗಳನ್ನು ಇಲ್ಲಿಂದ ತೊಲಗಿಸೋಣ' ಎಂದು ಕರೆ ನೀಡಿದರು.ಜಿಲ್ಲಾ ಬಚಾವೊ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಇದರ ಜಂಟಿ ವೇದಿಕೆ ನೇತೃತ್ವದಲ್ಲಿ ನಡೆಯುತ್ತಿರುವ ಧರಣಿಯ 79ನೇ ದಿನ ಪೂರ್ಣಗೊಳಿಸಿದ್ದು, ಬಲ್ಡೋಟ, ಕಿರ್ಲೋಸ್ಕರ್, ಕಲ್ಯಾಣಿ ಸ್ಟೀಲ್, ಮುಕುಂದ ಸುಮಿ, ಎಕ್ಸ್ ಇಂಡಿಯಾ ಸೇರಿದಂತೆ ವಿವಿಧ ಕಾರ್ಖಾನೆಗಳ ವಿಸ್ತರಣೆ ವಿರೋಧಿಸಿ ಧರಣಿ ನಡೆಯುತ್ತಿದೆ. ಅನೇಕ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸಹಿ ಸಂಗ್ರಹ ಅಭಿಯಾನದಲ್ಲಿ ಪಾಲ್ಗೊಂಡರು.ಶರಣಬಸವ ಬೆಟ್ಟದೂರು ಮಾತನಾಡಿ 'ಗವಿಸಿದ್ದೇಶ್ವರ ವಿದ್ಯಾ ಸಂಸ್ಥೆಯಲ್ಲಿ ಶಿಕ್ಷಣ ಪಡೆದು ಬಹುದಿನಗಳ ಕಾಲ ಇಲ್ಲಿಯೇ ಇದ್ದು ಈ ನಗರ, ಗ್ರಾಮೀಣ ಸೊಬಗು ಅನುಭವಿಸಿದ್ದೇನೆ. ಆದರೆ ಈಗ ಪರಿಸರ ಉಳಿದಿಲ್ಲ. ತುಂಗಭದ್ರಾ ನೀರು ಕಾರ್ಖಾನೆಗಳು ನಿಯಮಾವಳಿ ಮೀರಿ ಹರಿಸಿಕೊಳ್ಳುತ್ತಿದ್ದು ನನ್ನ ಸ್ವಗ್ರಾಮ ಬೆಟ್ಟದೂರು ಟೇಲೆಂಡ್ ಆಗಿ ಒಣಬೇಸಾಯಕ್ಕೆ ಸಿಮಿತಗೊಂಡಿದೆ' ಎಂದರು.ಜಂಟಿ ಕ್ರಿಯಾ ವೇದಿಕೆ ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು, ಬಿ.ಜಿ. ಕರಿಗಾರ, ರವಿ ಕಾಂತನವರ, ಎಸ್.ಬಿ. ರಾಜೂರು, ಶಂಭುಲಿಂಗಪ್ಪ ಹರಗೇರಿ, ಗವಿಸಿದ್ದಪ್ಪ ಹಲಿಗಿ, ಮಹಾದೇವಪ್ಪ ಮಾವಿನಮಡು, ಅಮಿತ್ ಮಾಲಗಿತ್ತಿ, ಶಿವಪ್ಪ ಜಲ್ಲಿ, ಉದ್ಯಮಿ ಗವಿಸಿದ್ದಪ್ಪ ಮುದಗಲ್, ಪರಮೇಶ್ವರಪ್ಪ ಕೊಪ್ಪಳ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101